ವಿಜಯಪುರ | ಸಂಪುಟ 04 | ಸಂಚಿಕೆ 167 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com

RNI NO: KARKAN/2023/86203

ಮಂಗಳವಾರ, ಆಗಸ್ಟ್, 25, 2026

"ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ನೂರಾರು ಕೋಟಿ ಹಣವನ್ನು ಕೊಳ್ಳೆ ಹೊಡೆದು, ದಲಿತರ ಹೊಟ್ಟೆಯ ಮೇಲೆ ಹೊಡೆದ ಭ್ರಷ್ಟ ಸಚಿವ ಬಿ.ನಾಗೇಂದ್ರ ಅವರನ್ನು ಸಂಪುಟದಿಂದ ವಜಾಗೊಳಿಸುವವರೆಗೆ ನಮ್ಮ ಹೋರಾಟದ ಕಿಚ್ಚು ನಂದಲು ಸಾಧ್ಯವೇ ಇಲ್ಲ."



■ ಆರ್.ಅಶೋಕ
ವಿಧಾನಸಭೆ ವಿಪಕ್ಷ ನಾಯಕರು

# ಮಹಿಳಾ ವಿವಿ ಕುಲಸಚಿವರಾಗಿ ಡಾ.ಅಜೂರ್ ಅಧಿಕಾರ ಸ್ವೀಕಾರ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಇಲ್ಲಿಯ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ನೂತನ ಕುಲಸಚಿವರಾಗಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಡಾ.ವಿಜಯಕುಮಾರ್ ಬಿ. ಅಜೂರ್ ಅವರು ಸೋಮವಾರ ಅಧಿಕಾರ ಸ್ವೀಕರಿಸಿದರು.

ನಿರ್ಗಮಿತ ಕುಲಸಚಿವ ಶಂಕರಗೌಡ ಸೋಮನಾಳ ಅವರು ಅಧಿಕೃತವಾಗಿ ಅಧಿಕಾರ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ವಿಜಯಾ ಕೋರಿಶೆಟ್ಟಿ, ಮೌಲ್ಯಮಾಪನ ಕುಲಸಚಿವ ಪ್ರೊ.ಬಿ.ಎಲ್.ಲಕ್ಕಣ್ಣವರ ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಡಾ.ವಿಜಯಕುಮಾರ್ ಬಿ. ಅಜೂರ್ ಅವರನ್ನು ಆತ್ಮೀಯವಾಗಿ ಸ್ವಾಗತಿಸಿ, ನೂತನ ಹೊಣೆಗಾರಿಕೆಯಲ್ಲಿ ಯಶಸ್ಸು ಸಾಧಿಸಲಿ ಎಂದು ಶುಭ ಹಾರೈಸಿದರು. ನೂತನ ಕುಲಸಚಿವರಾದ ಡಾ.ವಿಜಯಕುಮಾರ್ ಬಿ. ಅಜೂರ್ ಅವರಿಗೆ ವಿಶ್ವವಿದ್ಯಾಲಯದ ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಚಟುವಟಿಕೆಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಮುನ್ನಡೆಸುವಲ್ಲಿ ಯಶಸ್ಸು ದೊರೆಯಲಿ ಎಂದು ವಿಶ್ವವಿದ್ಯಾಲಯದ ಬೋಧಕ ಸಿಬ್ಬಂದಿಗಳಾದ ಪ್ರೊ.ಪಿ.ಜಿ.ತಡಸದ, ಪ್ರೊ.ಓಂಕಾರ ಕಾಕಡೆ, ಪ್ರೊ.ಜಿ.ಜಿ.ರಜಪೂತ, ಪ್ರೊ.ನಾಮದೇವಗೌಡ ಮತ್ತು ಪ್ರೊ.ಸಕ್ಪಾಲ್ ಹೂವಣ್ಣ ಆಶಿಸಿದರು.

ಇದೇ ಸಂದರ್ಭದಲ್ಲಿ ನಿರ್ಗಮಿತ ಕುಲಸಚಿವ ಶಂಕರಗೌಡ ಸೋಮನಾಳ ಅವರನ್ನು ಕುಲಪತಿ, ಮೌಲ್ಯಮಾಪನ ಕುಲಸಚಿವರು ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಅಭಿನಂದಿಸಿ, ವಿಶ್ವವಿದ್ಯಾಲಯದ ಸೇವೆಗೆ ನೀಡಿದ ಕೊಡುಗೆಗಾಗಿ ಕೃತಜ್ಞತೆ ಸಲ್ಲಿಸಿದರು. ಅವರ ಮುಂದಿನ ಸೇವಾ ಪಯಣ ಯಶಸ್ವಿಯಾಗಲಿ ಎಂದು ಹಾರೈಸಿದರು.



# ಕರಡು ಮತದಾರರ ಪಟ್ಟಿ ಆಕ್ಷೇಪಣೆಗೆ ಸೆ.23 ಕೊನೆ ದಿನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ಎಂಟು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆಗೆ (ಎಸ್‌ಐಆರ್) ಸಂಬಂಧಿಸಿದಂತೆ ಮನೆ-ಮನೆ ಸಮೀಕ್ಷೆ ಹಾಗೂ ಪರಿಶೀಲನೆ ಕಾರ್ಯ ಕೈಗೊಂಡು ಸೋಮವಾರ ಅಂತಿಮ ಕರಡು ಪ್ರತಿ ಪ್ರಕಟಿಸಲಾಗಿದ್ದು, ಆಕ್ಷೇಪಣೆಗಳಿದ್ದಲ್ಲಿ ರಾಜಕೀಯ ಪಕ್ಷಗಳವರು ಸೆ. 23ರೊಳಗಾಗಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಪೂರ್ಣಗೊಂಡಿದೆ. ಕರಡು ಮತದಾರರ ಪಟ್ಟಿಯನ್ನು ಜಿಲ್ಲೆಯ ಎಲ್ಲಾ ತಹಶೀಲ್ದಾರ್ ಕಚೇರಿಗಳು, ತಾಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯತಿಯಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಲಾಗಿದೆ ತಿಳಿಸಿದರು. ಮತದಾರರು ಹಾಗೂ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಕರಡು ಪಟ್ಟಿಯನ್ನು ಪರಿಶೀಲಿಸಬಹುದಾಗಿದೆ. ಒಂದು ವೇಳೆ ಯಾವುದೇ ತಮ್ಮ ಹಕ್ಕು ಮತ್ತು ಆಕ್ಷೇಪಣೆಗಳಿದ್ದಲ್ಲಿ ಆಗಸ್ಟ್ 24 ರಿಂದ ಸೆಪ್ಟೆಂಬರ್ 23 ರವರೆಗೆ ಸಲ್ಲಿಸಬಹುದಾಗಿದೆ ಎಂದರು. ಸಭೆಯಲ್ಲಿ ಜಿಲ್ಲೆಯ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

**ವಿಜಯಪುರದಲ್ಲಿ ರಾಜಕೀಯ ಪಕ್ಷ ಪ್ರತಿನಿಧಿಗಳ ಸಭೆ ನಡೆಸಿದ ಜಿಲ್ಲಾಧಿಕಾರಿ ಡಾ.ಆನಂದ್ ಕೆ**



## ವಿಜಯಪುರದಲ್ಲಿ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧ್ರಿ ಹೇಳಿಕೆ

# ಮಹಿಳೆಯರ ಸುರಕ್ಷತೆಗೆ ಕಾನೂನು ಅರಿವು ಅಗತ್ಯ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ ತಡೆಗಟ್ಟುವ ನಿಟ್ಟಿನಲ್ಲಿ ಜಾರಿಯಲ್ಲಿರುವ ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ ಮತ್ತು ನಿವಾರಿಸುವಿಕೆ) ಕಾಯ್ದೆ2013ರ ಕುರಿತು ಪ್ರತಿಯೊಬ್ಬರೂ ಸಮಗ್ರ ಅರಿವು ಹೊಂದಿರಬೇಕು ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧ್ರಿ ಹೇಳಿದರು. ಜಿಲ್ಲಾಡಳಿತ,ಜಿಲ್ಲಾ ಪಂಚಾಯಿತಿ,ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ,ಕರ್ನಾಟಕ ರಾಜ್ಯ ಮಹಿಳಾ ಆಯೋಗ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಸೋಮವಾರ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು, ಸ್ಥಳೀಯ ಮತ್ತು ಆಂತರಿಕ ದೂರು ನಿವಾರಣಾ ಸಮಿತಿ ಅಧ್ಯಕ್ಷರಿಗೆ ಆಯೋಜಿಸಿದ್ದ ತರಬೇತಿ ಕಾರ್ಯಾಗಾರದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಮಹಿಳೆಯರು ಕೆಲಸದ ಸ್ಥಳದಲ್ಲಿ ಯಾವುದೇ ರೀತಿಯ ದೌರ್ಜನ್ಯ, ಕಿರುಕುಳ ಅಥವಾ ಅನ್ಯಾಯವನ್ನು ಸಹಿಸಿಕೊಂಡು ಮೌನವಾಗಿರಬಾರದು. ಸಮಸ್ಯೆ ಎದುರಾದ ಸಂದರ್ಭದಲ್ಲಿ ಕಾಯ್ದೆಯಡಿ ರಚಿಸಲಾಗಿರುವ ಆಂತರಿಕ ದೂರು ಸಮಿತಿಗೆ ದೂರು ಸಲ್ಲಿಸಬೇಕು. ಕೆಲಸದ ಸ್ಥಳದಲ್ಲಿ ಮಹಿಳೆಯರ ಸುರಕ್ಷತೆ ಮತ್ತು ಗೌರವ ಕಾಪಾಡುವ ದೃಷ್ಟಿಯಿಂದ ಸ್ಥಳೀಯ ಹಾಗೂ ಆಂತರಿಕ ದೂರು ನಿವಾರಣಾ ಸಮಿತಿಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕು ಎಂದು ಅವರು ತಿಳಿಸಿದರು. ಪಾಶ್ (ಕಔಖಊ) ಕಾಯ್ದೆಯ ಉದ್ದೇಶ, ನಿಯಮಗಳು ಹಾಗೂ ಆಂತರಿಕ ದೂರು ಸಮಿತಿಯ ಪ್ರಮುಖ ಕರ್ತವ್ಯಗಳ ಕುರಿತು ಅಧಿಕಾರಿಗಳು ಹಾಗೂ ಸಮಿತಿಯ ಸದಸ್ಯರು ಸಮಗ್ರ ಅರಿವು ಹೊಂದಬೇಕು. ಮಹಿಳೆಯರ ಮೇಲಿನ ದೌರ್ಜನ್ಯ ತಡೆಗಟ್ಟುವಲ್ಲಿ ಕಾಯ್ದೆಯ ಅರಿವು ಅತ್ಯಂತ ಮಹತ್ವದ್ದಾಗಿದೆ ಎಂದು ನಾಗಲಕ್ಷ್ಮೀ ಚೌಧ್ರಿ ಹೇಳಿದರು.

ಮಹಿಳೆಯರು ಯಾವುದೇ ರೀತಿಯ ಅನ್ಯಾಯಕ್ಕೆ ಒಳಗಾದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಮೂಲಕ ಲಭ್ಯವಿರುವ ಉಚಿತ ಕಾನೂನು ಸೇವೆ ಪಡೆದುಕೊಳ್ಳಬೇಕು. ನೊಂದ ಮಹಿಳೆಯರು ತಮ್ಮ ಸಮಸ್ಯೆಗಳಿಗೆ ಕಾನೂನು ಪರಿಹಾರ ಪಡೆಯಲು ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಆಯೋಗದ ಅಧ್ಯಕ್ಷರು ಸಲಹೆ ನೀಡಿದರು.

ತರಬೇತಿದಾರ ಪ್ರಕಾಶ ಅವರು ಪಿಪಿಟಿ ಮೂಲಕ ಪಾಶ್ ಕಾಯ್ದೆ ಕುರಿತು ಮಾಹಿತಿ ನೀಡಿದರು.

ಕಾರ್ಯಾಗಾರದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಅರವಿಂದ ಎಸ್. ಹಾಗರಗಿ, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಪ್ರಕಾಶ ವಡ್ಡರ, ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಕಾರ್ಯದರ್ಶಿ ರೂಪಾ ಆರ್.ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಡಾ. ಸಂತೋಷಕುಮಾರ ಎಚ್. ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

## ಪ್ರತಿಪಕ್ಷಗಳ ಪ್ರತಿಭಟನೆ, ಗದ್ದಲದ ನಡುವೆ ಯಾವುದೇ ಚರ್ಚೆಯಿಲ್ಲದೇ ವಿಧಾನ ಪರಿಷತ್ತಿನಲ್ಲಿ ಎರಡು ವಿಧೇಯಕಗಳು ಪಾಸ್

# ವಿಧಾನ ಪರಿಷತ್ತಿನಲ್ಲಿ ಎರಡು ಮಸೂದೆಗಳ ಅಂಗೀಕಾರ

ಬೆಂಗಳೂರು: ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣಕ್ಕೆ ಸಂಬಂಧಿಸಿದಂತೆ ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿ ಪ್ರತಿಪಕ್ಷ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರ ಪ್ರತಿಭಟನೆ ಮತ್ತು ಗದ್ದಲದ ನಡುವೆಯೇ ವಿಧಾನ ಪರಿಷತ್ತಿನಲ್ಲಿ ಯಾವುದೇ ಚರ್ಚೆ ಇಲ್ಲದೆ ಎರಡು ಮಸೂದೆಗಳನ್ನು ಅಂಗೀಕರಿಸಲಾಯಿತು.



ವಿರೋಧ ಪಕ್ಷಗಳ ಪ್ರತಿಭಟನೆಯ ನಡುವೆಯೇ ಕರ್ನಾಟಕ ಪುರಸಭೆಗಳ ತಿದ್ದುಪಡಿ ಮಸೂದೆ 2026 ಮತ್ತು ಕರ್ನಾಟಕ ಅಪಾರ್ಟ್‌ಮೆಂಟ್ ಮಾಲೀಕತ್ವ ಹಾಗೂ ನಿರ್ವಹಣಾ ಮಸೂದೆ 2026 ಅನ್ನು ಅಂಗೀಕರಿಸಲಾಯಿತು. ನಗರಾಭಿವೃದ್ಧಿ ಸಚಿವ ಯತೀಂದ್ರ ಸಿದ್ದರಾಮಯ್ಯ ಅವರು ಕರ್ನಾಟಕ ಪುರಸಭೆಗಳ ತಿದ್ದುಪಡಿ ಮಸೂದೆ 2026 ಅನ್ನು ಮಂಡಿಸಿದರು. ಸಭಾಪತಿ ಸಲೀಂ ಅಹ್ಮದ್ ಅವರು ಮಸೂದೆಯನ್ನು ಮತಕ್ಕೆ ಹಾಕಿದರು ಮತ್ತು, ಗದ್ದಲದ ನಡುವೆಯೇ, ಪ್ರಸ್ತಾವನೆಯನ್ನು ಅಂಗೀಕರಿಸಲಾಗಿದೆ" ಎಂದು ಘೋಷಿಸಿದರು. ನಂತರ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರು ಕರ್ನಾಟಕ ಅಪಾರ್ಟ್ಮೆಂಟ್ ಮಾಲೀಕತ್ವ ಮತ್ತು ನಿರ್ವಹಣಾ ಮಸೂದೆ 2026 ಅನ್ನು ಮಂಡಿಸಿದರು."ಇಂದು ಹೆಚ್ಚು ಹೆಚ್ಚು ಜನರು ಅಪಾರ್ಟ್ಮೆಂಟ್ಗಳಲ್ಲಿ ವಾಸಿಸುತ್ತಿದ್ದಾರೆ. ಅಪಾರ್ಟ್ಮೆಂಟ್ ವಾಸಕ್ಕೆ ಸಂಬಂಧಿಸಿದಂತೆ ಹಲವು ಸಮಸ್ಯೆಗಳಿವೆ" ಎಂದು ಕೃಷ್ಣ ಬೈರೇಗೌಡರು ಹೇಳಿದರು.

ಅಪಾರ್ಟ್ಮೆಂಟ್ ನಿವಾಸಿ ಕಲ್ಯಾಣ ಸಂಘಗಳನ್ನು ಹೊಸ ಕಾನೂನಿನಡಿಯಲ್ಲಿ ನೋಂದಾಯಿಸಬೇಕಾಗುತ್ತದೆ ಮತ್ತು ವಾರ್ಷಿಕ ಲೆಕ್ಕಪರಿಶೋಧನೆ ಕಡ್ಡಾಯವಾಗಿರುತ್ತವೆ ಎಂದು ಅವರು ತಿಳಿಸಿದರು.

## ಪ್ರತಿಪಕ್ಷಗಳ ವಿರುದ್ಧವೇ ಕಾಂಗ್ರೆಸ್ ಪ್ರತಿಭಟನೆ



ಬೆಂಗಳೂರು: ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿ ವಿಧಾನ ಸೌಧದ ಹೊರಗೆ ಬಿಜೆಪಿ ತನ್ನ ಪ್ರತಿಭಟನೆಯನ್ನು ತೀವ್ರಗೊಳಿಸಿದ ಬೆನ್ನಲ್ಲೇ, ಅದಕ್ಕೆ ಪ್ರತಿಯಾಗಿ ರಾಜ್ಯ ಸರ್ಕಾರವಲ್ಲ ಬದಲಾಗಿ ಬಿಜೆಪಿಯೇ ಭ್ರಷ್ಟಾಚಾರದಲ್ಲಿ ಭಾಗಿಯಾಗಿದೆ ಎಂದು ಆರೋಪಿಸಿ ಕರ್ನಾಟಕ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ವಾಲ್ಮೀಕಿ ನಿಗಮದಲ್ಲಿ ನಡೆದಿದೆ ಎನ್ನಲಾದ 187 ಕೋಟಿ ಹಗರಣದ ಹಿನ್ನೆಲೆಯಲ್ಲಿ ಸಚಿವ ಬಿ ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿ, ವಿರೋಧ ಪಕ್ಷದ ನಾಯಕ ಆರ್ ಅಶೋಕ ಸೇರಿದಂತೆ ಬಿಜೆಪಿ ಕಾರ್ಯಕರ್ತರು ವಿಧಾನಸೌಧಕ್ಕೆ ಮುತ್ತಿಗೆ ಹಾಕಲು ಯತ್ನಿಸಿದ ಬಳಿಕ ಕಾಂಗ್ರೆಸ್ ಕಾರ್ಯಕರ್ತರೂ ಪ್ರತಿಭಟನೆ ನಡೆಸಿದ್ದಾರೆ.

ಪ್ರತಿಭಟನೆಯ ಸಂದರ್ಭದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಕರ್ನಾಟಕದ ಪ್ರಮುಖ ಬಿಜೆಪಿ ಮತ್ತು ಜೆಡಿಎಸ್ ನಾಯಕರ ಮುಖವಾಡಗಳನ್ನು ಧರಿಸಿದ್ದರು.

## ಬಸವಭೀಮ ಸಂಗಮ' ಕಾರ್ಯಕ್ರಮದಲ್ಲಿ ಲೋಕೋಪಯೋಗಿ ಇಲಾಖೆ ಸಚಿವ ಸತೀಶ ಜಾರಕಿಹೊಳಿ ಅಭಿಮತ

# ಇತಿಹಾಸ ಮರೆಮಾಚುವ ಷಡ್ಯಂತ್ರದ ವಿರುದ್ಧ ಜನ ಜಾಗೃತರಾಗಬೇಕು

■ ಉದಯರಶ್ಮಿ ದಿನಪತ್ರಿಕೆ



ಬಾಗಲಕೋಟೆ: ಬಸವಣ್ಣನವರ ಚಿಂತನೆ, ವಚನ ಸಾಹಿತ್ಯ ಹಾಗೂ ಅಂಬೇಡ್ಕರ್ ಅವರ ಸಂವಿಧಾನಾತ್ಮಕ ಆಶಯಗಳನ್ನು ಇತಿಹಾಸದಿಂದ ಮರೆಮಾಚುವ ಯಾವುದೇ ಪ್ರಯತ್ನವನ್ನು ಸಹಿಸಬಾರದು. ಇಂತಹ ಷಡ್ಯಂತ್ರಗಳ ವಿರುದ್ಧ ಸಮಾಜ ಜಾಗೃತವಾಗಿ ಸಂಘಟಿತ ಹೋರಾಟ ನಡೆಸಬೇಕು ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಜಮಖಂಡಿ ತಾಲೂಕಿನ ಸಾವಳಗಿ ಸಮೀಪದ ಗೊಠೆ ಗ್ರಾಮದಲ್ಲಿ ಸತ್ಯಶೋಧಕ ಸಂಘದ ವತಿಯಿಂದ ಆಯೋಜಿಸಿದ್ದ 'ಜಾತ್ಯತೀತ, ಬಹುತ್ವ ಕರ್ನಾಟಕ ಸಂಕಲ್ಪದ ಸರ್ವಜಾತಿಸರ್ವಧರ್ಮ ಸಹೋದರತ್ವ ಸಮಾವೇಶ ಹಾಗೂ ಬಸವ ಭೀಮ ಸಂಗಮ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಸವಣ್ಣನವರ ವಿಚಾರಧಾರೆ ಜನಸಾಮಾನ್ಯರಿಗೆ ತಲುಪಬಾರದು ಎಂಬ ಉದ್ದೇಶದಿಂದ ಅವರ ವಚನಗಳನ್ನು ನಾಶಪಡಿಸುವ ಪ್ರಯತ್ನಗಳು ನಡೆದಿವೆ. ತಾಳಿಕೋಟೆ ಹಾಗೂ ಬಹಮನಿ ಸುಲ್ತಾನರ ಕಾಲಘಟ್ಟದ ಇತಿಹಾಸದ ವಿವಿಧ ಘಟನೆಗಳ ನಡುವೆಯೂ ಬಸವಣ್ಣನವರ ಚಿಂತನೆಗಳು ಉಳಿದುಕೊಂಡಿವೆ. ಜ್ಯೋತಿಬಾ ಫುಲೆ ಅವರು ಶಿವಾಜಿ ಮಹಾರಾಜರ ಇತಿಹಾಸವನ್ನು ಜನರಿಗೆ ಪರಿಚಯಿಸುವಲ್ಲಿ ಮಹತ್ವದ ಪಾತ್ರ ವಹಿಸಿದರು. ಅದೇ ರೀತಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಚಿಂತನೆ ಹಾಗೂ ಸಂವಿಧಾನದ ಆಶಯಗಳನ್ನು ಮರೆಮಾಚುವ ಪ್ರಯತ್ನಗಳ ಬಗ್ಗೆಯೂ ಎಚ್ಚರಿಕೆಯಿಂದ ಇರಬೇಕು ಎಂದರು.

"ಇತಿಹಾಸ ಓದದೆ ಇತಿಹಾಸ ತಿಳಿದುಕೊಳ್ಳಲು ಸಾಧ್ಯವಿಲ್ಲ. ಇತಿಹಾಸವನ್ನು ಅರಿತುಕೊಂಡಾಗ ಮಾತ್ರ ನಮ್ಮ ಮೇಲೆ ನಡೆದಿರುವ ಅನ್ಯಾಯ, ಅವಮಾನ ಹಾಗೂ ಶೋಷಣೆಯ ಸ್ವರೂಪ ಅರ್ಥವಾಗುತ್ತದೆ. ಈ ಅರಿವು ಕೇವಲ ಪಠ್ಯಪುಸ್ತಕ ಅಥವಾ ಕಂಪ್ಯೂಟರ್‌ನಿಂದ ಸಿಗುವುದಿಲ್ಲ; ಸಮಾಜದ ಇತಿಹಾಸವನ್ನು ನಾವು ಹುಡುಕಿ ಓದಬೇಕು" ಎಂದು ಹೇಳಿದರು.

ಜಿಲ್ಲಾ ಉಸ್ತುವಾರಿ ಸಚಿವ ವಿಜಯಾನಂದ ಕಾಶಪ್ಪನವರ ಮಾತನಾಡಿ, ನಮ್ಮ ಸಮಾಜದಲ್ಲಿ ಇನ್ನೂ ಸಮಾನತೆ ಮತ್ತು ಸಾಮಾಜಿಕ ನ್ಯಾಯದ ಕೊರತೆ ಇದೆ. ಬಸವಣ್ಣನವರಂತೆ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡು ಬದುಕಬೇಕು. ಸ್ವಾತಂತ್ರ್ಯ ಪಡೆದು 80 ವರ್ಷಗಳು ಕಳೆದರೂ ಸಂಪೂರ್ಣ ಸಮಾನತೆ ಸಾಧಿಸಲು ಸಾಧ್ಯವಾಗಿಲ್ಲ. ಸಮಾನತೆಯ ತಳಹದಿಯ ಮೇಲೆ ಸಮಾಜ ಕಟ್ಟಬೇಕಿದ್ದು, ವೈಯಕ್ತಿಕ ಸ್ವಾರ್ಥಕ್ಕಾಗಿ ಇಡೀ ಸಮಾಜವನ್ನು ಬಲಿಕೊಡಬಾರದು ಎಂದರು. ಬೀಳಗಿ ಶಾಸಕ ಜೆ.ಟಿ. ಪಾಟೀಲ ಮಾತನಾಡಿ, ಬಸವಣ್ಣನವರ ತತ್ವಗಳನ್ನು ಕೇವಲ ಭಾಷಣಗಳಿಗೆ ಸೀಮಿತಗೊಳಿಸಿ, ಆಚರಣೆಯಲ್ಲಿ ಅದಕ್ಕೆ ವಿರುದ್ಧವಾಗಿ ನಡೆದುಕೊಳ್ಳುತ್ತಿರುವುದು ವಿಷಾದನೀಯ ಎಂದರು.

ಸಂಘದ ಅಧ್ಯಕ್ಷ ಪರಶುರಾಮ ಮಹಾರಾಜನವರ ಮಾತನಾಡಿ, ಲಿಂಗಾಯತ ಎಂಬುದು ಕೇವಲ ಜಾತಿಯ ಗುರುತಲ್ಲ; ಬಸವಣ್ಣನವರು ಪ್ರತಿಪಾದಿಸಿದ ಮಾನವೀಯತೆ, ಸಮಾನತೆ ಹಾಗೂ ಅಸ್ಪೃಶ್ಯತೆ ವಿರೋಧಿ ಚಿಂತನೆಗಳ ಸಾಮಾಜಿಕ ಚಳವಳಿಯಾಗಿದೆ ಎಂದರು. ಗಂಗಾ ಅನಂತಪೂರ ಮಾತನಾಡಿದರು. ವೇದಿಕೆಯಲ್ಲಿ ಬಿ.ಎಸ್. ಸಿಂಧೂರ, ನಜೀರ ಕಂಗನೊಳ್ಳಿ, ಸಿದ್ದು ಕೊಣ್ಣೂರ, ಸುಶೀಲಕುಮಾರ ಬೆಳಗಲಿ, ಸಮೀರ ಕಂಗನೊಳ್ಳಿ, ಬಿ.ಜಿ. ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಸಂತೋಷ ತಳಕೇರಿ ಸ್ವಾಗತಿಸಿ ನಿರೂಪಿಸಿದರು.

## ಅಫಜಲಪುರ ತಾಲೂಕು ಆಡಳಿತದ ಮೂಗಿನಡಿಯಲ್ಲೇ ಅನೈರ್ಮಲ್ಯ | ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಸಾರ್ವಜನಿಕರ ಆಕ್ರೋಶ

# ಅನೈತಿಕ ಚಟುವಟಿಕೆಗಳ ತಾಣ ಅಫ್ಜಲ್ಪುರ್ ತಹಸೀಲ್ ಕಚೇರಿ ಆವರಣ

■ ಉದಯರಶ್ಮಿ ದಿನಪತ್ರಿಕೆ

■ ವಿಶೇಷ ವರದಿ





ಅಫಜಲಪುರ: ತಾಲೂಕು ಆಡಳಿತದ ಹೃದಯಭಾಗವಾದ ಪಟ್ಟಣದ ತಹಸೀಲ್ದಾರ್ ಕಚೇರಿಯ ಆವರಣವೇ ಇದೀಗ ಅನೈತಿಕ ದಂಧೆಗಳು ಮತ್ತು ನಶೆ ವ್ಯಸನಿಗಳ ಅಡ್ಡೆಯಾಗಿ ಮಾರ್ಪಟ್ಟಿರುವುದು ದುರಂತ.

ಸಾರ್ವಜನಿಕರು ತಮ್ಮ ನಿತ್ಯದ ಕೆಲಸ-ಕಾರ್ಯಗಳಿಗಾಗಿ ನಿತ್ಯ ನೂರಾರು ಸಂಖ್ಯೆಯಲ್ಲಿ ಭೇಟಿ ನೀಡುವ ಸರ್ಕಾರಿ ಕಚೇರಿಯ ಮೂತ್ರಾಲಯ ಹಾಗೂ ಹಿಂಭಾಗದ ಆವರಣದಲ್ಲಿ ಅಕ್ರಮ ಚಟುವಟಿಕೆಗಳ ಕರಾಳ ಮುಖ ಬಯಲಾಗಿದೆ.

ಕಚೇರಿಯ ಮೂತ್ರ ವಿಸರ್ಜನೆ ಮಾಡುವ ಜಾಗದಲ್ಲಿ ನಶೆ ಬರಿಸುವ ನಿಷೇಧಿತ ಕೆಮ್ಮಿನ ಔಷಧದ (ಅಂಣಾರು ಖಥಿಡಿಣಾ೦) ಖಾಲಿ ಬಾಟಲಿಗಳು ಹಾಗೂ ನಿರೋಧಗಳು (ಅಂಟಜಂಥ) ಅಸಹ್ಯಕರ ರೀತಿಯಲ್ಲಿ ಎಲ್ಲೆಂದರಲ್ಲಿ ಬಿದ್ದಿವೆ. ಇಷ್ಟೇ ಅಲ್ಲದೆ, ಆವರಣದ ಪಕ್ಕದಲ್ಲಿ ಮದ್ಯದ ಖಾಲಿ ಬಾಟಲಿಗಳು, ಸಿಗರೇಟ್ ತುಂಡುಗಳು, ಗುಟ್ಕಾ ಪ್ಯಾಕೆಟ್‌ಗಳು ಹಾಗೂ ಅಕ್ರಮ ಜೂಜಾಟಕ್ಕೆ ಬಳಸುವ ಚೀಟಿಗಳು ರಾಶಿ ರಾಶಿಯಾಗಿ ಬಿದ್ದಿರುವುದು ಬೆಳಕಿಗೆ ಬಂದಿದೆ.

ಕಣ್ಮುಚ್ಚಿ ಕುಳಿತ ಆಡಳಿತ ವ್ಯವಸ್ಥೆ: ತಾಲೂಕಿನ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡಬೇಕಾದ ತಹಸೀಲ್ದಾರ್ ಕಚೇರಿಯ ಆವರಣದಲ್ಲೇ ಇಂತಹ ಸಮಾಜಘಾತುಕ ಚಟುವಟಿಕೆಗಳು ರಾಜಾರೋಷವಾಗಿ ನಡೆಯುತ್ತಿದ್ದರೂ ಅಧಿಕಾರಿಗಳು ಕಣ್ಮುಚ್ಚಿ ಕುಳಿತಿದ್ದಾರೆ. ಕಚೇರಿಗೆ ಸೂಕ್ತ ಸಿಸಿಟಿವಿ ಕಣ್ಗಾವಲು ಹಾಗೂ ರಾತ್ರಿ ವೇಳೆ ಭದ್ರತಾ ಸಿಬ್ಬಂದಿಯ ಕೊರತೆಯೇ ಇಂತಹ ಅಕ್ರಮಗಳಿಗೆ ದಾರಿಯಾಗಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ಸಾರ್ವಜನಿಕರ ಆಗ್ರಹ: ತಾಲೂಕು ಆಡಳಿತ ಮತ್ತು ಪೊಲೀಸ್ ಇಲಾಖೆ ತಕ್ಷಣ ಎಚ್ಚೆತ್ತುಕೊಂಡು, ಕಚೇರಿ ಆವರಣದಲ್ಲಿ ನೈರ್ಮಲ್ಯ ಕಾಪಾಡಬೇಕು. ರಾತ್ರಿವೇಳೆಯಲ್ಲಿ ನಿರಂತರ ಪೊಲೀಸ್ ಗಸ್ತು ನಿಯೋಜಿಸಿ, ಇಂತಹ ಅಕ್ರಮ ಚಟುವಟಿಕೆಗಳಲ್ಲಿ ತೊಡಗುವ ಕಿಡಿಗೇಡಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ತಾಲೂಕಿನ ನಾಗರಿಕರು ಮತ್ತು ಸಂಘ-ಸಂಸ್ಥೆಗಳು ತೀವ್ರವಾಗಿ ಒತ್ತಾಯಿಸಿವೆ.

***ಮಹಿಳೆಯರು, ನಾಗರಿಕರ ಪರದಾಟ**

ನ್ಯಾಯ, ಪಹಣಿ, ಜಾತಿ-ಆದಾಯ ಪ್ರಮಾಣಪತ್ರ ಸೇರಿದಂತೆ ನಾನಾ ಕೆಲಸಗಳಿಗೆ ತಾಲೂಕು ಕಚೇರಿಗೆ ಬರುವ ಮಹಿಳೆಯರು ಹಾಗೂ ಸಾರ್ವಜನಿಕರು ಮೂತ್ರಾಲಯದ ಕಡೆ ಮುಖ ಮಾಡಲೂ ಹೇಸಿಗೆ ಪಡುವಂತಹ ಸ್ಥಿತಿ ನಿರ್ಮಾಣವಾಗಿದೆ. ಕಚೇರಿ ಆವರಣದಲ್ಲಿ ಕುಡುಕರಿಗೆ ಏನೂ ಕೆಲಸ ಎಂದು ಸಾರ್ವಜನಿಕರು ಕೇಳುತ್ತಿದ್ದಾರೆ.



## ರಾಮತೀರ್ಥ ಕ್ಷೇತ್ರಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ದುರಸ್ತಿಗೆ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ತಾಲ್ಲೂಕಿನ ಐತಿಹಾಸಿಕ ರಾಮತೀರ್ಥ ಕ್ಷೇತ್ರಕ್ಕೆ ಸಂಪರ್ಕ ಕಲ್ಪಿಸುವ ಪಡಗಾನೂರ ಕ್ರಾಸ್ ಮೂಲಕ ತೆರಳುವ ರಸ್ತೆ ಸಂಪೂರ್ಣ ಹಾಳಾಗಿದ್ದು ಕೂಡಲೇ ದುರಸ್ತಿಗೊಳಿಸುವಂತೆ ಭಕ್ತರು ಆಗ್ರಹಿಸಿದ್ದಾರೆ.

ಪಟ್ಟಣದ ನಿವಾಸಿ ಶಿವಾನಂದ ಕುಂಬಾರ ಈ ಕುರಿತು ಮಾತನಾಡಿ, ಮುಳಸಾವಳಗಿ, ಶಿವಣಗಿ, ಇಂಗಳಗಿ ಗ್ರಾಮಗಳ ಮಧ್ಯೆದಲ್ಲಿನ ರಾಮತೀರ್ಥ ಪ್ರಸಿದ್ಧ ಧಾರ್ಮಿಕ ತಾಣವಾಗಿದ್ದು, ಪ್ರತಿವರ್ಷ ಶ್ರಾವಣ ಮಾಸದ ಮೂರನೆಯ ಸೋಮವಾರ ಜಾತ್ರೆ ಜರುಗುತ್ತದೆ. ಇದು ರಾಮತೇರ ಜಾತ್ರೆ ಎಂದೇ ಜನಜನಿತವಾಗಿದೆ. ಇಲ್ಲಿಗೆ ದೇವರಹಿಪ್ಪರಗಿಯ ಕಲ್ಮೇಶ್ವರ, ಕರಿಸಿದ್ದೇಶ್ವರ ಸಹಿತ ಪಡಗಾನೂರ, ಇಂಗಳಗಿ, ನಿವಾಳಖೇಡ, ಹಡಗಲಿ, ಮುಳಸಾವಳಗಿ ದೇವರ ಪಲ್ಲಕ್ಕಿಗಳು ಆಗಮಿಸಿ ಭಕ್ತರಿಗೆ ದರ್ಶನ ನೀಡುತ್ತವೆ.

ಜಾತ್ರೆಯ ಅಂಗವಾಗಿ ಸಾವಿರಾರು ಜನರು ಕಾಲುನಡಿಗೆ, ದ್ವಿಚಕ್ರ ಸಹಿತ ವಿವಿಧ ವಾಹನಗಳ ಮೂಲಕ ಆಗಮಿಸುತ್ತಾರೆ. ಆದರೆ ಈ ರಸ್ತೆ ಈಗ ಸಂಪೂರ್ಣ ಹಾಳಾಗಿ ನಡೆಯಲು ಬಾರದಂತಾಗಿದೆ. ಜೊತೆಗೆ ರಸ್ತೆಯ ಎಡಬಲಗಳಲ್ಲಿ ಮುಳ್ಳು ಕಂಟಿಗಳು ಬೆಳೆದು ತೊಂದರೆ ಉಂಟು ಮಾಡುತ್ತಿವೆ ಎನ್ನುತ್ತಾರೆ.

ಜಾತ್ರೆಯ ಮುನ್ನ ಮುಳಸಾವಳಗಿ, ಶಿವಣಗಿ ಗ್ರಾಮ ಪಂಚಾಯಿತಿ ಹಾಗೂ ದೇವರಹಿಪ್ಪರಗಿ ಪಟ್ಟಣ ಪಂಚಾಯಿತಿ ಈ ಕುರಿತು ಕ್ರಮ ಕೈಗೊಂಡು ಬರುವ ಭಕ್ತರಿಗೆ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ಪಟ್ಟಣದ ಚಿನ್ಮಯ ಕೋರಿ, ಕಾಶೀನಾಥ ಸಾಲಕ್ಕಿ, ಯಲಗೂರೇಶ ದೇವೂರ, ರಾವುತ ಅಗಸರ, ನಾಗೇಂದ್ರ ಇಂಡಿ, ರಮೇಶ ಈಳಗೇರ, ಬಸವರಾಜ ಕಲ್ಲೂರ (ಮುಳಸಾವಳಗಿ), ಸಿದ್ಧನಗೌಡ ಗೋಡ್ಯಾಳ(ಇಂಗಳಗಿ), ಚನ್ನಪ್ಪ ಕಾರಜೋಳ (ನಿವಾಳಖೇಡ) ಆಗ್ರಹಿದ್ದಾರೆ.




## ಅಧ್ಯಕ್ಷರಾಗಿ ಬಾಲಗೊಂಡ, ಕಾರ್ಯದರ್ಶಿಯಾಗಿ ಜಂಗಮಶೆಟ್ಟಿ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು ಇದರ ಕೊಲ್ಹಾರ ತಾಲೂಕು ಘಟಕದ ನೂತನ ಅಧ್ಯಕ್ಷರಾಗಿ ಕೆ.ಎಸ್. ಬಾಲಗೊಂಡ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಸಂಗಮೇಶ ಜಂಗಮಶೆಟ್ಟಿ ಅವರನ್ನು ಆಯ್ಕೆ ಮಾಡಿ ಆದೇಶಿಸಲಾಗಿದೆ. ವಿಜಯಪುರದಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಜ್ಯ ಉಪಾಧ್ಯಕ್ಷರು ಹಾಗೂ ವಿಜಯಪುರ ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಸುರೇಶ ಶೆಡಶ್ಯಾಳ ಅವರು ನೂತನ ಪದಾಧಿಕಾರಿಗಳ ನೇಮಕಾತಿ ಆದೇಶ ನೀಡಿದರು.

ಕೊಲ್ಹಾರ ಸರ್ಕಾರಿ ಹೆಣ್ಣು ಮಕ್ಕಳ ಹಿರಿಯ ಪ್ರಾಥಮಿಕ ಶಾಲೆಯ ಸಹಶಿಕ್ಷಕರಾದ ಕೆ.ಎಸ್. ಬಾಲಗೊಂಡ ಅವರನ್ನು ತಾಲ್ಲೂಕು ಅಧ್ಯಕ್ಷರಾಗಿ ಹಾಗೂ ರೋಣಿಹಾಳದ ಸಮೂಹ ಸಂಪನ್ಮೂಲ ವ್ಯಕ್ತಿಯಾಗಿರುವ ಸಂಗಮೇಶ ಜಂಗಮಶೆಟ್ಟಿ ಅವರನ್ನು ಪ್ರಧಾನ ಕಾರ್ಯದರ್ಶಿಯಾಗಿ ಆಯ್ಕೆ ಮಾಡಲಾಗಿದೆ.

ಈ ಸಂದರ್ಭದಲ್ಲಿ ರಾಜ್ಯ ಉಪಾಧ್ಯಕ್ಷರಾದ ಸುರೇಶ ಶೆಡಶ್ಯಾಳ, ಬಿ.ಟಿ. ಗೌಡರ, ಶಿವಾನಂದ ಮಂಗನ್ನವರ, ಕರ್ನಾಟಕ ರಾಜ್ಯ ಶಿಕ್ಷಕರ ಸಂಘದ ರಾಜ್ಯಾಧ್ಯಕ್ಷೆ ಸುಮತಿ ಜಿ., ರಾಜ್ಯ ಉಪಾಧ್ಯಕ್ಷ ನಾಗನಗೌಡ, ರಾಜ್ಯ ಪ್ರಧಾನ ಕಾರ್ಯದರ್ಶಿ ಸಂತೋಷ ಸಲಗರ, ಅತಿಥಿಗಳಾದ ನೀಲಾ ಇಂಗಳೇ, ಜಯಶ್ರೀ ಬೆಣ್ಣಿ, ಕಲಬುರಗಿ ಜಿಲ್ಲಾಧ್ಯಕ್ಷ ಮಲ್ಲಯ್ಯ ಗುತ್ತೇದಾರ, ವಿಜಯಪುರ ಜಿಲ್ಲಾ ಅಧ್ಯಕ್ಷ ಜಗದೀಶ ಬೋಳಸೂರ, ರವೀಂದ್ರ ಉಗಾರ ಸೇರಿದಂತೆ ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಹಂತದ ಪದಾಧಿಕಾರಿಗಳು ಮತ್ತು ಜಿಲ್ಲೆಯ ಸರ್ಕಾರಿ ನೌಕರರು ಉಪಸ್ಥಿತರಿದ್ದರು.

ನೂತನ ಅಧ್ಯಕ್ಷರು ಹಾಗೂ ಪ್ರಧಾನ ಕಾರ್ಯದರ್ಶಿಗಳ ಆಯ್ಕೆಗೆ ಸರ್ಕಾರಿ ನೌಕರರು ಅಭಿನಂದನೆ ಸಲ್ಲಿಸಿ, ಸಂಘದ ಬಲವರ್ಧನೆ ಹಾಗೂ ನೌಕರರ ಹಿತಾಸಕ್ತಿಗಾಗಿ ಉತ್ತಮವಾಗಿ ಕಾರ್ಯನಿರ್ವಹಿಸುವ ವಿಶ್ವಾಸ ವ್ಯಕ್ತಪಡಿಸಿದರು.




## ಕೃಷಿ & ತೋಟಗಾರಿಕೆ ಇಲಾಖೆ ಸೌಲಭ್ಯ ಪಡೆದುಕೊಳ್ಳಿ :ನಟರಾಜ್

■ ಉದಯರಶ್ಮಿ ದಿನಪತ್ರಿಕೆ

ಚಡಚಣ: ಕೃಷಿಯನ್ನೇ ಪ್ರಮುಖ ಕಸುಬನ್ನಾಗಿಸಿಕೊಂಡಿರುವ ರೈತರು ಸಾಂಪ್ರದಾಯಿಕ ಬೆಳೆಗಳೊಂದಿಗೆ ತೋಟಗಾರಿಕೆ ಬೆಳೆಗಳನ್ನೂ ಬೆಳೆಯುವ ಮೂಲಕ ಕಡಿಮೆ ಅವಧಿಯಲ್ಲಿ ಹೆಚ್ಚಿನ ಆದಾಯ ಗಳಿಸಿ ಆರ್ಥಿಕವಾಗಿ ಸದೃಢರಾಗಬೇಕು ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ ಇಂಡಿ ತಾಲ್ಲೂಕು ಯೋಜನಾಧಿಕಾರಿ ನಟರಾಜ್ ಎಲ್.ಎಂ. ಹೇಳಿದರು.

ಚಡಚಣ ತಾಲೂಕಿನ ಲೋಣಿ ಬಿ.ಕೆ. ವಲಯದ ಲಮಾಣಿಹಟ್ಟಿ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ ವತಿಯಿಂದ ರೈತ ಕ್ಷೇತ್ರ ಪಾಠಶಾಲೆ ಕಾರ್ಯಕ್ರಮದಡಿ 'ತೋಟಗಾರಿಕೆ ಬೆಳೆಗಳ ಬೇಸಾಯ ಮತ್ತು ತಾಂತ್ರಿಕತೆ' ಕುರಿತು ಹಮ್ಮಿಕೊಂಡಿದ್ದ ಮಾಹಿತಿ ಕಾರ್ಯಾಗಾರವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ನಿತ್ಯ ಜೀವನದ ಪ್ರಮುಖ ಕಸುಬು ಕೃಷಿಯಾಗಿರುವುದರಿಂದ ರೈತರು ಕೃಷಿ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಿ, ಆಧುನಿಕ ತಂತ್ರಜ್ಞಾನ ಹಾಗೂ ವೈಜ್ಞಾನಿಕ ಪದ್ಧತಿಗಳನ್ನು ಅಳವಡಿಸಿಕೊಳ್ಳಬೇಕು. ಕಡಿಮೆ ಅವಧಿಯಲ್ಲಿ ಉತ್ತಮ ಇಳುವರಿ ಹಾಗೂ ಹೆಚ್ಚಿನ ಆದಾಯ ನೀಡುವ ತೋಟಗಾರಿಕೆ ಬೆಳೆಗಳನ್ನು ಬೆಳೆಯುವುದರಿಂದ ರೈತರ ಆದಾಯವನ್ನು ಹೆಚ್ಚಿಸಿಕೊಳ್ಳಲು ಸಾಧ್ಯವಿದೆ ಎಂದರು.

ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದ ಸಹಾಯಕ ತೋಟಗಾರಿಕೆ ಅಧಿಕಾರಿ ರಮೇಶ ರಾಠೋಡ ಅವರು ತೋಟಗಾರಿಕೆ ಇಲಾಖೆಯಿಂದ ರೈತರಿಗೆ ದೊರೆಯುವ ವಿವಿಧ ಅನುದಾನಗಳು, ಸೌಲಭ್ಯಗಳು ಹಾಗೂ ಯೋಜನೆಗಳ ಕುರಿತು ಮಾಹಿತಿ ನೀಡಿದರು.

ರೈತ ಸಂಪರ್ಕ ಕೇಂದ್ರದ ಅಧಿಕಾರಿ ಪ್ರಭು ಅರವತ್ತಿ ಅವರು ತೋಟಗಾರಿಕೆ ಬೆಳೆಗಳನ್ನು ಯಾವ ರೀತಿಯಲ್ಲಿ ಹಾಗೂ ಯಾವ ವಿಧಾನದಲ್ಲಿ ಬೆಳೆಯಬೇಕು, ಕೃಷಿಯಲ್ಲಿ ಸಾವಯವ ಪದ್ಧತಿಗಳನ್ನು ಅಳವಡಿಸಿಕೊಳ್ಳುವ ವಿಧಾನ, ಬೆಳೆ ನಿರ್ವಹಣೆ ಸೇರಿದಂತೆ ವಿವಿಧ ವಿಷಯಗಳ ಕುರಿತು ರೈತರಿಗೆ ತಾಂತ್ರಿಕ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಮೇಲ್ವಿಚಾರಕ ಮಹಾಂತೇಶ್ ವಿ.ಎ.ಸ್ವಾಗತಿಸಿದರು. ತಾಲ್ಲೂಕು ಕೃಷಿ ಮೇಲ್ವಿಚಾರಕ ಸುದೀಪ್ ಎಸ್.ಕೆ. ವಂದಿಸಿದರು. ಗ್ರಾಮ ಪಂಚಾಯಿತಿ ಸದಸ್ಯರಾದ ಶ್ರೀಶೈಲ್ ಬಿರಾದಾರ, ಜಾನಕಿ ಬಿರಾದಾರ, ಅನಿತಾ ಬಿರಾದಾರ, ಸವಿತಾ ಬಿರಾದಾರ,ಸ್ಥಳೀಯ ಸೇವಾಪ್ರತಿನಿಧಿ ಲಕ್ಷ್ಮೀ ಹಿರೇಮಠ ಸೇರಿದಂತೆ ಸಂಘದ ಸದಸ್ಯರು ಹಾಗೂ ರೈತರು ಉಪಸ್ಥಿತರಿದ್ದರು.

### ಬಿ.ಎಲ್.ಡಿ.ಇ ಸಂಸ್ಥೆಯ ಎಸ್.ಬಿ ಕಲಾ ಮತ್ತು ಕೆ.ಸಿ.ಪಿ ವಿಜ್ಞಾನ ಮಹಾವಿದ್ಯಾಲಯದಲ್ಲಿ ಸದ್ಭಾವನಾ ದಿನಾಚರಣೆ

## ದೇಶದ ಅಭಿವೃದ್ಧಿಗೆ ರಾಷ್ಟ್ರೀಯ ಏಕತೆ ಅತ್ಯಗತ್ಯ :ಡಾ.ನಾಯಕ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ದೇಶದ ಅಭಿವೃದ್ಧಿಗೆ ರಾಷ್ಟ್ರೀಯ ಏಕತೆ ಮತ್ತು ಕೋಮು ಸಾಮರಸ್ಯ ಅತ್ಯಗತ್ಯ ಎಂದು ಪ್ರಾಚಾರ್ಯ ಡಾ.ಅನೀಲ ಭಿ.ನಾಯಕ ಹೇಳಿದರು

ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎಸ್ ಬಿ ಕಲಾ ಮತ್ತು ಕೆಸಿಪಿ ವಿಜ್ಞಾನ ಮಹಾವಿದ್ಯಾಲಯದಲ್ಲಿ ಐಕ್ಯೂಎಸಿ, ಎನ್ ಎಸ್ ಎಸ್ ಘಟಕ 1 & 2 ರ ಸಹಯೋಗದಲ್ಲಿ ಆ.20 ರಂದು ಹಮ್ಮಿಕೊಳ್ಳಲಾಗಿದ್ದ ಸದ್ಭಾವನಾ ದಿನಾಚರಣೆಯಲ್ಲಿ ಮಾತನಾಡಿದರು. ಸದ್ಭಾವನಾ ದಿನದಂದು ವೈವಿಧ್ಯಮಯ ನಂಬಿಕೆಗಳ ಭಾರತೀಯರಲ್ಲಿ ರಾಷ್ಟ್ರೀಯ ಏಕತೆ, ಶಾಂತಿ, ಸಹಾನುಭೂತಿ ಮತ್ತು ಕೋಮು ಸೌಹಾರ್ದತೆಯ ಪ್ರತೀಕವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿ ಡಾ. ತರನ್ನಮ್ ಜಬೀನ್ ಖಾನ್ ಅವರು ಸದ್ಭಾವನಾ ದಿನಾಚರಣೆಯ ಮಹತ್ವ ಮತ್ತು ಪ್ರಸ್ತುತತೆಯ ಕುರಿತು ಮಾತನಾಡಿದರು.

ಈ ವೇಳೆಯಲ್ಲಿ ಶಾಂತಿಯನ್ನು ಕಾಪಾಡಿಕೊಳ್ಳಲು, ವೈವಿಧ್ಯತೆಯನ್ನು ಗೌರವಿಸಲು ಮತ್ತು ಭಾರತದ ಏಕತೆ ಮತ್ತು ಸಮಗ್ರತೆಯನ್ನು ಬಲಪಡಿಸಲು ಪ್ರತಿಜ್ಞಾ ವಿಧಿ ಸ್ವೀಕರಿಸಲಾಯಿತು.

ಈ ಸಂದರ್ಭದಲ್ಲಿ ಐಕ್ಯೂಎಸಿ ಸಂಯೋಜಕ ಡಾ. ಪಿ.ಎಸ್.ಪಾಟೀಲ್, ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿ ಡಾ.ಮಿಲನ್ ರಾಠೋಡ, ಸಮಾಜಶಾಸ್ತ್ರದ ವಿಭಾಗದ ಮುಖ್ಯಸ್ಥ ಅಕ್ಷಯ್ ಜನಾಯ್ ಸೇರಿದಂತೆ ಮಹಾವಿದ್ಯಾಲಯದ ಬೋಧಕರು,ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ವಿಜಯಪುರದಲ್ಲಿ ಹಿರಿಯ ಸಾಹಿತಿ ಸಿದ್ಧರಾಮ ಉಪ್ಪಿನರ ಕೃತಿ 'ಅಲ್ಲಮನೊಂದಿಗೆ ಅನುಸಂಧಾನ' ಬಿಡುಗಡೆ

## ಕನ್ನಡ ಭವನದಲ್ಲಿ ಜೈನ ಸಾಹಿತ್ಯ, ತತ್ವಗಳ ಕುರಿತು ಬೆಳಕು

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: "ಮಾನವ ಕುಲಂ ತಾನೊಂದೆ ವಲಂ' ಎನ್ನುವ ಜೈನ ಸಾಹಿತ್ಯದ ಧ್ಯೇಯದ ಜೊತೆ 'ಬಯಲನ್ನು ಬಿತ್ತಿದ' ಅಲ್ಲಮನ ಅನುಸಂಧಾನವನ್ನು ಸಾಹಿತ್ಯ ಪರಿಷತ್ ಸಾಕಾರಗೊಳಿಸಿರುವುದು ಬಹಳ ವಿಶೇಷ ಎಂದು ಸಂಶೋದಕ ಡಾ.ಮಲ್ಲಿಕಾರ್ಜುನ ಮೇತ್ರಿ ಹೇಳಿದರು.

ಇಲ್ಲಿನ ಕನ್ನಡ ಭವನದಲ್ಲಿ ಭಾನುವಾರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಆಯೋಜಿಸಿದ್ದ ಷಹಾ ಪ್ರತಾಪಚಂದ ಫೀರಾಜಿ ಓಸ್ವಾಲ್ ಹಾಗೂ ಕಾಂತಿಲಾಲ ಪ್ರತಾಪಚಂದ ಓಸ್ವಾಲ್ ದತ್ತಿ ಉಪನ್ಯಾಸಗಳ ಅಂಗವಾಗಿ ನಡೆದ ಜೈನ ಧರ್ಮದ ತತ್ವಗಳು, ಕನ್ನಡ ಸಾಹಿತ್ಯಕ್ಕೆ ಜೈನರ ಕೊಡುಗೆ ಕುರಿತ ಉಪನ್ಯಾಸ ಮತ್ತು ಸಿದ್ದರಾಮ ಉಪ್ಪಿನ ಅವರ 'ಅಲ್ಲಮನೊಂದಿಗೆ ಅನುಸಂಧಾನ' ಪುಸ್ತಕ ಬಿಡುಗಡೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಜೈನ ಧರ್ಮದ ಮೂಲ ಸೆಲೆ ಮಾನವೀಯತೆ. ಜ್ಞಾನ ಮತ್ತು ಚಾರಿತ್ರ್ಯದ ದಾರಿ ಹಾಕಿ ಕೊಟ್ಟವರು ಜೈನ ಪರಂಪರೆಯವರು. ದೀರ್ಘ ಸಾಹಿತ್ಯಿಕ ನೆಲೆಗೆ ಅವರ ಕೊಡುಗೆ ಅಪಾರ. ಕನ್ನಡ ಸಾಹಿತ್ಯ ಶ್ರೇಷ್ಠವಾಗಿದ್ದು, ಈ ಬುನಾದಿ ಭದ್ರಗೊಳಿಸುವಲ್ಲಿ ಜೈನ ಸಾಹಿತ್ಯದ ಪಾತ್ರ ಬಹಳವಿದೆ ಎಂದರು.

ಜೈನ ಸಾಹಿತ್ಯದಲ್ಲಿ ನಾಲ್ಕು ನೂರು ಕವಿಗಳು ಇದ್ದರು. ವಿಜಯಪುರ ಕೂಡ ಹಿಂದೆ ಬಸದಿಗಳ ಊರಾಗಿತ್ತು. ಪಂಪ, ರನ್ನ, ಪೊನ್ನ, ಜನ್ನರನ್ನು ನೆನೆಯಬೇಕು. ಈ ಕವಿಗಳಿಗೆ ರಾಜಾಶ್ರಯ ಸಿಕ್ಕಿದ್ದರಿಂದ ಕನ್ನಡ ಭಾಷೆ ಬೆಳೆಯಿತು. ರಾಜರು ಇವರನ್ನು ಬಂಗಾರದ ಹೂವಿನಿಂದ ಸತ್ಕರಿಸುತ್ತಿದ್ದರು. ಇದು ಅವರು ಸಾಹಿತ್ಯ, ಕವಿಗೆ ನೀಡಿದ ಮನ್ನಣೆ ಎಂದರು.

ಆನೆ ನಡೆದಿದ್ದೇ ಮಾರ್ಗ ಎನ್ನುವಂತೆ ಪಂಪನು ಮಾರ್ಗ ಕವಿಯಾಗಿದ್ದ. ಲೌಕಿಕ, ಆಗಮಿಕದ ಮೂಲಕ ಅವನು ಅನನ್ಯ ಅಕ್ಷರದ ಲೋಕ ತೆರೆದಿದ್ದಾನೆ. 'ನೆನೆಯುವುದೆನ್ನ ಮನ ಬನವಾಸಿ' ಎನ್ನುವ ಆತನ ಪ್ರತಿ ಸಾಲುಗಳು ಅಗಾಧ. ತೀರ್ಥಂಕರರ ಬಗ್ಗೆ ಬರೆದ ಎಲ್ಲ ಕವಿಗಳ ಸಾಹಿತ್ಯ ಮೋಕ್ಷಕ್ಕೆ ಕರದೊಯ್ಯುತ್ತವೆ. ನಮ್ಮ ಜಿಲ್ಲೆಯ ಹೆಮ್ಮೆ ಮಹಾಕವಿ ರನ್ನ ಸರಸ್ವತಿಯ ಭಂಡಾರ ಒಡೆದು ಬರೆದಿದ್ದೇನೆ ಎಂದು ಹೇಳಿದ್ದು ಓದುವುದೇ ಪುಣ್ಯ. ವಿಜಯಪುರದ ಕವಿ ನಾಗಚಂದ್ರನನ ಮೇಲೆ ಇನ್ನಷ್ಟು ಬೆಳಕು ಚೆಲ್ಲಬೇಕಿದೆ. ಪರಿಷತ್ ಜೈನ ತತ್ವ, ಸಾಹಿತ್ಯವನ್ನು ಸ್ಮರಿಸುತ್ತಿರುವುದು ಒಳ್ಳೆಯದು ಎಂದರು.

ಉಪನ್ಯಾಸ ನೀಡಿದ ಡಾ.ಆನಂದ ಕುಲಕರ್ಣಿ, ವಿಜಯಪುರದ ನಾಗಚಂದ್ರ ಅವರು ಕನ್ನಡದ ಮೊದಲ ರಾಮಾಯಣ ಬರೆದ ಕವಿ. ಇದು ನಮ್ಮವರಿಗೇ ಗೊತ್ತಿರಲಿಲ್ಲ. ಮಹಿಳಾ ವಿವಿಯಲ್ಲಿ ನಾಗಚಂದ್ರ ಪೀಠ ಮಾಡಿ, ಪಠ್ಯದಲ್ಲಿ ಅವರನ್ನು ಸೇರಿಸಬೇಕು. ನಮ್ಮವರನ್ನು ನಾವು ಗುರುತಿಸದಿದ್ದರೆ ಹೇಗೆ ಎಂದು ಪ್ರಶ್ನಿಸಿದ ಅವರು,

ನಾಗಚಂದ್ರನ ಪುರಾಣದಿಂದಲೇ ವಿಜಯಪುರ ಎನ್ನುವ ಹೆಸರು ಬಂದಿದೆ. ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದ ಕೀರ್ತಿ ಜೈನ ಕವಿಗಳಿಗೆ ಸಲ್ಲುತ್ತದೆ ಎಂದರು.

### ಅನುಸಂಧಾನ ಅಷ್ಟು ಸರಳವಲ್ಲ

**ಅಲ್ಲಮನನ್ನು ತೆಕ್ಕೆಗೆ ಹಾಕಿಕೊಂಡು ಸಾಹಿತಿ ಸಿದ್ದರಾಮ ಉಪ್ಪಿನವರು ಪುಸ್ತಕ ಬರೆದಿದ್ದು ಅಪರೂಪದ ಸಂಗತಿ ಎಂದು ಡಾ.ಮಲ್ಲಿಕಾರ್ಜುನ ಮೇತ್ರಿ ಹೇಳಿದರು.**

**ಶರಣ ಅಲ್ಲಮರದ್ದು ಸತ್ತವರ ಕತೆಯಲ್ಲ, ಅವರು ನಿತ್ಯ ಬಯಲು. ಇವರ ಬಗ್ಗೆ ಉಪ್ಪಿನವರು ಬರೆದಿರುವ 'ಅಲ್ಲಮನೊಂದಿಗೆ ಅನುಸಂಧಾನ' ಪುಸ್ತಕ ಬಿಡುಗಡೆಗೊಳಿಸಿದ್ದು ಪರಿಷತ್‌ನವರ ಕಾರ್ಯ ಶ್ಲಾಘನೀಯವಾಗಿದೆ. ಜೈನ ಸಾಹಿತ್ಯದ ಚರ್ಚೆ ಜೊತೆ ಶರಣ ಪರಂಪರೆಯ ಮೇರು ಅರಿವಿನ ಅಲ್ಲಮನ ಬಗೆಗಿನ ಕೃತಿ ಬಿಡುಗಡೆಗೊಂಡಿದ್ದು ಸಮಯೋಚಿತ ಎಂದರು.**

ಕೃತಿ ಪರಿಚಯ ಲೇಖಕಿ ಮಮತಾ ಮುಳಸಾವಳಗಿಯವರು 'ಅಲ್ಲಮನೊಂದಿಗೆ ಅನುಸಂಧಾನ' ಕೃತಿ ಪರಿಚಯ ಮಾಡಿ ಮಾತನಾಡಿ, ಅಂತರಾತ್ಮವನ್ನು ಜಾಗೃತಿಗೊಳಿಸುವ ಕೃತಿ ಇದಾಗಿದೆ. ಅಲ್ಲಮನು ಶೂನ್ಯದೊಂದಿಗೆ ನಡೆಸುವ ಆಂತರಿಕ ಹೊಯ್ದಾಟ ಇದರಲ್ಲಿದೆ. ದಾರ್ಶನಿಕತೆ ಜೊತೆಗೆ ಅಲ್ಲಮನ ಮೇಲೆ ಸಾಕಷ್ಟು ಬೆಳಕು ಚೆಲ್ಲಿದ್ದಾರೆ. ಪುಸ್ತಕದ ಸಾಲುಗಳು ಮನ ಮುಟ್ಟಿ ಚಿಂತನೆಗೆ ಹಚ್ಚುತ್ತವೆ. ನೋವುಂಡ ನಜುಂಡವರಂತೆ ಉಪ್ಪಿನವರು ಅಲ್ಲಮನೊಂದಿಗೆ ಅನುಸಂಧಾನಗೊಂಡಿದ್ದಾರೆ ಎಂದರು.

ಪ್ರಾಧ್ಯಾಪಕ ಡಾ.ಎಂ.ಎಸ್. ಮಾಗಣಗೇರಿ ಅವರು ಅಧ್ಯಕ್ಷತೆ ವಹಿಸಿದ್ದರು. ಭೀಮನಗೌಡ ಬಿರಾದಾರ, ಅಮೀನಸಾಬ ಹಳ್ಳೂರ, ರಿಯಾನಾ ಬೇಗಂ ಹಳ್ಳೂರ ಅತಿಥಿಗಳಾಗಿದ್ದರು. ಅಭಿಷೇಕ ಚಕ್ರವರ್ತಿ ಪ್ರಾಸ್ತಾವಿಕ ಮಾತನಾಡಿದರು. ಶಿಲ್ಪಾ ಭಸ್ಮೆ ನಿರೂಪಿಸಿದರು. ರಿಯಾಜ್ ಪಿಂಜಾರ ಸ್ವಾಗತಿಸಿದರೆ ವಿಜಯಲಕ್ಷ್ಮಿ ಹಳಕಟ್ಟಿ ವಂದಿಸಿದರು. ಕಸಾಪ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲಿಕಾರ, ರಾಜಶೇಖರ ಭೋವಿ, ಬಸವರಾಜ ಮಾಡ್ಯಾಳ, ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿದ್ಯಾಲಯದ ಬಿ.ಕೆ.ಶೃತಿ, ಜಿಎಸ್ ಬಳ್ಳೂರ, ಶಶಿಕಲಾ ನಾಯ್ಕೋಡಿ, ಶಿವಕುಮಾರ ಉಪ್ಪಿನ, ಲತಾ ವಾಲೀಕಾರ (ಗುಂಡಿ), ಶರಣಮ್ಮ ಹಾದಿಮನಿ, ಗಂಗಮ್ಮ ರೆಡ್ಡಿ, ಸಮೃದ್ಧಿ ಆಕಳವಾಡಿ, ಶ್ರೀಕಾಂತ ನಾಡಗೌಡ, ಬಿ.ವಿ. ಪಟ್ಟಣಶೆಟ್ಟಿ, ಎಮ್.ಎಸ್.ನಿಂಬಾಳ, ಎಲ್.ಬಿ.ಶೇಖ್, ಪ್ರದೀಪ ನಾಯ್ಕೋಡಿ, ಸಹನಾ ಬಿರಾದಾರ, ಲಕ್ಷ್ಮಿ ಬಿರಾದಾರ, ಶಿವಲೀಲಾ ಬಿ.ಕೆ. ಅನೇಕರಿದ್ದರು.

### ಬಸವತಿಳುವಳಿಕೆ ಮತ್ತು ಸಂಶೋಧನಾ ಕೇಂದ್ರ ಪುಣೆಯ, ವಿಜಯಪುರ ಜಿಲ್ಲಾಘಟಕದಿಂದ ಏರ್ಪಾಡು

## ಅರ್ಥಪೂರ್ಣವಾಗಿ ಜರುಗಿದ ಅರಿವಿನ ಮನೆ ಕಾರ್ಯಕ್ರಮ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರದಲ್ಲಿ ಬಸವತಿಳುವಳಿಕೆ ಮತ್ತು ಸಂಶೋಧನಾ ಕೇಂದ್ರ ಪುಣೆಯ, ವಿಜಯಪುರ ಜಿಲ್ಲಾಘಟಕದಿಂದ ಅದರ ಗೌರವಾಧ್ಯಕ್ಷೆ ಡಾ ಸರಸ್ವತಿ ಪಾಟೀಲ ಇವರ ಸ್ವಗೃಹದಲ್ಲಿ ರವಿವಾರ ಸಂಜೆ ಅರಿವಿನ ಮನೆ ಕಾರ್ಯಕ್ರಮ ಅರ್ಥಪೂರ್ಣವಾಗಿ ಜರುಗಿತು.


ಈ ಕಾರ್ಯಕ್ರಮದಲ್ಲಿ ಎರಡು ಅನುಭಾವಗಳು ನಡೆದಿದ್ದು ಅತ್ಯಂತ ವಿಶೇಷ. ಜೊತೆಗೆ ಆಶೀರ್ವಚನವನ್ನು ಸೇರಿಸಿದರೆ ಮೂರು ಅನುಭಾವಗಳನ್ನು ಈ ಒಂದೇ ಒಂದು ವೇದಿಕೆಯಲ್ಲಿ ಎಲ್ಲರಿಗೂ ಉಣಬಡಿಸಿದ್ದು ಅ ರ್ಥಪೂರ್ಣವಾಗಿತ್ತು. ಅನುಭಾವ1.

'ವಚನಗಳ ಮೌಲಿಕ ಸಂದೇಶ ಮತ್ತು ಪ್ರಸ್ತುತತೆ' ಈ ವಿಷಯವನ್ನು ಕುರಿತು ಮೊದಲ ಅನುಭಾವವನ್ನು ನೀಡಿದಂಥವರು ನಿವೃತ್ತ ಉಪನ್ಯಾಸಕಿ ಶರಣೆ ಡಾ. ಮೀನಾಕ್ಷಿ ಪಾಟೀಲ ಮೇಡಂ ಅವರು ಸಹಾಯಕ ಸಂಶೋಧಕರು ಕರ್ನಾಟಕ ರಾಜ್ಯ ಜಾನಪದ ಅಕಾಡೆಮಿ ಬೆಂಗಳೂರು. ಇವರಿಂದ ವಿಷಯ ಮಂಡಣೆಯೂ ಅನುಭಾವದ ಎತ್ತರದ ನಿಟ್ಟಿನಲ್ಲಿ ಎಲ್ಲರಿಗೂ ಮನಸ್ಸಿನ ಆಳದಲ್ಲಿ ಶೋಭಿಸುವ ಹಾಗೆ ಮಾಡಿದರು. ಅನುಭಾವ 2: 'ಕ್ರಾಂತಿಗಂಗೋತ್ರಿ ಅಕ್ಕನಾಗಮ್ಮ ಅವರ ಜೀವನದರ್ಶನ'ವನ್ನು ಕುರಿತು ಉಪನ್ಯಾಸ ನೀಡಿದಂಥವರು ಶರಣೆ ಶಿಲ್ಪಾ ಭಸ್ಮೆ ಅವರು. ಶಿಕ್ಷಕಿಯರು ಹಾಗೂ ಗೌರವಕಾರ್ಯದರ್ಶಿಗಳು ಕನ್ನಡ ಸಾಹಿತ್ಯ ಪರಿಷತ್ತು ವಿಜಯಪುರ,ಇವರು ಮೂರ್ತಿ ಚಿಕ್ಕದಾದರೂ ಕೀರ್ತಿದೊಡ್ಡದು, ಎನ್ನುವಂತೆ ಚಿಕ್ಕ ವಯಸ್ಸಿನಲ್ಲಿ ಅಪಾರ ಸಾಧನೆಯನ್ನು ಮಾಡಿದಂಥಹ ಇವರು ಅತ್ಯಂತ ನಿರರ್ಗಳವಾಗಿ ಅನುಭಾವವನ್ನು ಹಂಚಿಕೊಂಡದ್ದು ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು.

ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಪೂಜ್ಯ ಅತ್ತಿವೇರಿ ಬಸವರಾಜೇಶ್ವರಿ ಅಮ್ಮನವರನ್ನು ಪರಿಚಯಿಸಿದ ಡಾ.ಸರಸ್ವತಿ ಪಾಟೀಲ ಮೇಡಂ ಅವರಿಗೆ ಗೌರವ ಸಮರ್ಪಿಸಿದರು. ಶರಣೆ ಕಲಾವತಿ ಪಟ್ಟಣಶೆಟ್ಟಿ ಪ್ರಾರ್ಥಿಸಿದರು. ಡಾ. ಶಾರದಾಮಣಿ ಹುಣಶ್ಯಾಳ ಸ್ವಾಗತಿಸಿದರು. ಶಿವಶಂಕರ ಕೋನರಡ್ಡಿ ಪರಿಚಯಿಸಿದರು. ಶರಣೆ ಬನಶ್ರೀ ಹತ್ತಿ ನಿರ್ವಹಿಸಿದರು. ವಿಜಯಪುರ ಘಟಕದ ಜಿಲ್ಲಾ ಅಧ್ಯಕ್ಷ ಆರ್. ಎಸ್ ಬಿರಾದಾರ ಶರಣು ಸಮರ್ಪಿಸಿದರು. ಶರಣೆ ಬ್ಯಾಳಿ ವಚನ ಮಂಗಳ ನಡೆಸಿಕೊಟ್ಟರು. ಕಾರ್ಯಕ್ರಮದಲ್ಲಿ ಜಿಲ್ಲಾ ಘಟಕದ ಉಪಾಧ್ಯಕ್ಷ ಸಿದ್ದಪ್ಪಾ ಪಡನಾಡ, ರೇಖಾ ಬಿರಾದಾರ, ಮಹಿಳಾ ಘಟಕದ ಅಧ್ಯಕ್ಷೆ ರೇಣುಕಾ ಪಾಟೀಲ, ಸುಜಾತಾ ಹಳಕಟ್ಟಿ, ತ್ರಿವೇಣಿ ಬುರ್ಲಿ, ರತ್ನಕ್ಕಾ ಬಿರಾದಾರ, ಗೀತಾ ದೇಸಾಯಿ ಸೇರಿದಂತೆ 89 ಶರಣ ಶರಣೆಯರು ಭಾಗವಹಿಸಿದ್ದರು.

## ವಾಲಿಬಾಲ್: ಸಂಗಮೇಶ್ವರ ಪಪೂ ಕಾಲೇಜ್ ಬಾಲಕರ ತಂಡ ಪ್ರಥಮ

■ ಉದಯರಶ್ಮಿ ದಿನಪತ್ರಿಕೆ



ಕೊಲ್ಹಾರ: ಅಖಂಡ ಬಸವನ ಬಾಗೇವಾಡಿ ತಾಲ್ಲೂಕಿನ ಪದವಿ ಪೂರ್ವ ಕಾಲೇಜುಗಳ ಕ್ರೀಡಾಕೂಟದ ಅಂಗವಾಗಿ ಹೂವಿನ ಹಿಪ್ಪರಗಿಯ ಶ್ರೀ ಯೋಗೇಶ್ವರಿ ಮಾತಾ ಕಲಾ ಮತ್ತು ವಾಣಿಜ್ಯ ಪದವಿ ಪೂರ್ವ ಕಾಲೇಜು ಹಾಗೂ ಶ್ರೀ ಪವಾಡ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಪದವಿ ಪೂರ್ವ ಕಾಲೇಜಿನ ಸಹಯೋಗದಲ್ಲಿ ಶನಿವಾರ ಮತ್ತು ಭಾನುವಾರ ವಾಲಿಬಾಲ್ ಕ್ರೀಡಾಕೂಟ ನಡೆಯಿತು.

ಕ್ರೀಡಾಕೂಟದಲ್ಲಿ ಪಟ್ಟಣದ ಶ್ರೀ ಸಂಗಮೇಶ್ವರ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಪದವಿ ಪೂರ್ವ ಕಾಲೇಜಿನ ಬಾಲಕರ ತಂಡ ಪ್ರಥಮ ಸ್ಥಾನ ಪಡೆದು, ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದೆ.

ವಿದ್ಯಾರ್ಥಿಗಳ ಈ ಸಾಧನೆಗೆ ಶ್ರೀ ಸಂಗಮೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರು, ಕಾರ್ಯದರ್ಶಿಗಳು ಹಾಗೂ ಸರ್ವ ಸದಸ್ಯರು, ಪ್ರಾಚಾರ್ಯರು ಮತ್ತು ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತಪಡಿಸಿ, ಸಾಧನೆ ಮಾಡಿದ ಎಲ್ಲ ವಿದ್ಯಾರ್ಥಿಗಳಿಗೆ ತುಂಬು ಹೃದಯದ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ. "ಕ್ರೀಡೆಯಲ್ಲಿ ಸಾಧನೆ ಮಾಡುವ ಮೂಲಕ ಕಾಲೇಜಿನ ಕೀರ್ತಿಯನ್ನು ಹೆಚ್ಚಿಸಿರುವ ವಿದ್ಯಾರ್ಥಿಗಳು ಜಿಲ್ಲಾ ಮಟ್ಟದಲ್ಲಿಯೂ ಉತ್ತಮ ಪ್ರದರ್ಶನ ನೀಡಿ ಯಶಸ್ಸು ಸಾಧಿಸಲಿ" ಎಂದು ಶುಭ ಹಾರೈಸಿದ್ದಾರೆ.



# ಮಳೆಗಾಗಿ ಸಾರಂಗಮಠದಲ್ಲಿ 24 ಗಂಟೆಗಳ ಕಾಲ ಶಿವ ಸಪ್ತಾಹ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಸಾರಂಗಮಠದಲ್ಲಿ ಶ್ರೀಮಠದ ಪೀಠಾಧ್ಯಕ್ಷರಾದ ಪೂಜ್ಯಶ್ರೀ ಡಾ.ಪ್ರಭುಸಾರಂಗದೇವ ಶಿವಾಚಾರ್ಯರ ನೇತೃತ್ವದಲ್ಲಿ ತಾಲೂಕಿನಾದ್ಯಂತ ಉತ್ತಮ ಮಳೆಯಾಗಲಿ, ರೈತರಿಗೆ ಸಮೃದ್ಧ ಬೆಳೆ ದೊರೆಯಲಿ ಹಾಗೂ ನಾಡಿನ ಜನತೆ ಸುಖ, ಶಾಂತಿ ಮತ್ತು ಸಮೃದ್ಧಿಯಿಂದ ಬದುಕಲಿ ಎಂಬ ಸಂಕಲ್ಪದೊಂದಿಗೆ 24ಗಂಟೆಗಳ ಕಾಲ ಶಿವ ಸಪ್ತಾಹ ಧಾರ್ಮಿಕ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಸಿಂದಗಿ ಸಾರಂಗಮಠದಲ್ಲಿ ಪೀಠಾಧಿಪತಿಗಳ ನೇತೃತ್ವದಲ್ಲಿ ನಡೆಯುತ್ತಿರುವ ಕಾರ್ಯಕ್ರಮದಲ್ಲಿ ಭಕ್ತರು ಹಾಗೂ ವಿವಿಧ ಗ್ರಾಮಗಳಿಂದ ಆಗಮಿಸಿರುವ ಶಿವಭಕ್ತರು ಭಾಗವಹಿಸಿ ನಿರಂತರವಾಗಿ ಶಿವನಾಮಸ್ಮರಣೆ, ಭಜನೆ, ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ಮಳೆ ಕೊರತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ, ನಾಡಿನಲ್ಲಿ ಉತ್ತಮ ಮಳೆಯಾಗಿ ಜಲಾಶಯಗಳು, ಕೆರೆ-ಕಟ್ಟೆಗಳು ತುಂಬಿ, ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗಲಿ ಹಾಗೂ ರೈತರ ಬದುಕು ಹಸನಾಗಲಿ ಎಂಬ ಪ್ರಾರ್ಥನೆಯೊಂದಿಗೆ ಶಿವ ಸಪ್ತಾಹ ನಡೆಸಲಾಗುತ್ತಿದೆ ಎಂದು ಸಮ್ಮುಖ ವಹಿಸಿದ ಶ್ರೀಮಠದ ಉತ್ತರಾಧಿಕಾರಿಗಳಾದ ಪೂಜ್ಯಶ್ರೀ ಡಾ.ವಿಶ್ವಪ್ರಭುದೇವ ಶಿವಾಚಾರ್ಯರು ಹೇಳಿದರು.

24ಗಂಟೆಗಳ ಕಾಲ ನಡೆಯುವ ಈ ಧಾರ್ಮಿಕ ಕಾರ್ಯಕ್ರಮದಲ್ಲಿ ಭಕ್ತರು ಶ್ರದ್ಧಾಭಕ್ತಿಯಿಂದ ಪಾಲ್ಗೊಂಡು ಮಳೆಯಿಗಾಗಿ ಪ್ರಾರ್ಥನೆ ಸಲ್ಲಿಸುತ್ತಿದ್ದಾರೆ. ಕಾರ್ಯಕ್ರಮದ ಅಂಗವಾಗಿ ಶಿವನಾಮಸ್ಮರಣೆ, ಭಜನೆ, ಹಾಗೂ ವಿವಿಧ ಧಾರ್ಮಿಕ ವಿಧಿವಿಧಾನಗಳು ಜರುಗುತ್ತಿವೆ. ಮಳೆಗಾಗಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸುವ ಮೂಲಕ ರೈತರ ಸಂಕಷ್ಟ ನಿವಾರಣೆಯಾಗಲಿ, ನಾಡಿನಲ್ಲಿ ಉತ್ತಮ ಮಳೆಯಾಗಿ ಸಮೃದ್ಧಿ ನೆಲೆಸಲಿ ಎಂಬ ಆಶಯವನ್ನು ಭಕ್ತರು ವ್ಯಕ್ತಪಡಿಸಿದ್ದಾರೆ.

# ಬೆಳೆ ವಿಮೆ ಪಡೆಯಲು ಬೆಳೆ ಸಮೀಕ್ಷೆ ಅಗತ್ಯ :ತಹಶೀಲ್ದಾರ್ ಬೆಳ್ಳಿ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ತಾಲೂಕಿನಲ್ಲಿ ಒಟ್ಟು 17,552 ರೈತರು ಬೆಳೆ ವಿಮೆ ಪಾವತಿಸಿದ್ದಾರೆ. ಬೆಳೆ ವಿಮೆಯ ಕ್ಲೇಮ್ ಪಡೆಯಲು ಬೆಳೆ ಸಮೀಕ್ಷೆ ಅತ್ಯಂತ ಪ್ರಮುಖವಾಗಿದ್ದು, ರೈತರು ಸಮೀಕ್ಷೆ ಸಂದರ್ಭದಲ್ಲಿ ಅಗತ್ಯ ಮಾಹಿತಿಯನ್ನು ಸಮರ್ಪಕವಾಗಿ ಒದಗಿಸಬೇಕು. ಬೆಳೆ ಸಮೀಕ್ಷೆ ನಡೆಸುವ ಸಿಬ್ಬಂದಿ ರೈತ-ರಿಂದ ಯಾವುದೇ ರೀತಿಯ ಹಣವನ್ನು ಪಡೆಯಬಾರದು. ಸಮೀಕ್ಷೆ ಕಾರ್ಯದಲ್ಲಿ ನೇಮಕಗೊಂಡ ಸಿಬ್ಬಂದಿ ಅಕ್ರಮ ಅಥವಾ ಕರ್ತವ್ಯಲೋಪ ಎಸಗಿರುವುದು ಕಂಡುಬಂದರೆ ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ತಹಶೀಲ್ದಾರ್ ಕರೆಪ್ಪ ಬೆಳ್ಳಿ ಹೇಳಿದರು.

ಸಿಂದಗಿ ತಾಲೂಕು ಆಡಳಿತ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ತಾಲೂಕಿನಾದ್ಯಂತ ಬೆಳೆ ಸಮೀಕ್ಷೆ ಕಾರ್ಯ ಪ್ರಗತಿಯಲ್ಲಿದ್ದು, ಪ್ರತಿಯೊಬ್ಬ ರೈತರು ಬೆಳೆ ಸಮೀಕ್ಷೆಯಲ್ಲಿ ಕಡ್ಡಾಯವಾಗಿ ಭಾಗವಹಿಸಿ ತಮ್ಮ ಜಮೀನಿನಲ್ಲಿ ಬೆಳೆದಿರುವ ಬೆಳೆಗಳ ಸಂಪೂರ್ಣ ಮಾಹಿತಿಯನ್ನು ನೀಡಬೇಕು. ಜಮೀನಿನ ವಿಸ್ತೀರ್ಣ, ಸರ್ವೆ ನಂಬರ್ ಹಾಗೂ ವಿವಿಧ ಹಿಸ್ಸಾಗಳಲ್ಲಿ ಬೆಳೆದಿರುವ ಬೆಳೆಗಳ ನಿಖರ ಮಾಹಿತಿ ನೀಡುವುದ-ರಿಂದ ಸರ್ಕಾರದ ವಿವಿಧ ಸೌಲಭ್ಯಗಳು ಹಾಗೂ ಬೆಳೆ ವಿಮೆಯ ಪ್ರಯೋಜನ ಪಡೆಯಲು ಅನುಕೂಲವಾಗಲಿದೆ. ತಾಲೂಕಿನ ವಿವಿಧ ಗ್ರಾಮಗಳಲ್ಲಿ ಬೆಳೆ ಸಮೀಕ್ಷೆ ನಡೆಸಲು ಸಿಬ್ಬಂದಿಯನ್ನು ನೇಮಕ ಮಾಡಲಾಗಿದೆ. ನೇಮಕಗೊಂಡ



ಸಿಬ್ಬಂದಿ ರೈತರ ಜಮೀನಿಗೆ ಭೇಟಿ ನೀಡಿದ ಸಂದರ್ಭದಲ್ಲಿ ರೈತರು ತಮ್ಮ ಜಮೀನಿನ ಒಟ್ಟು ವಿಸ್ತೀರ್ಣ, ಯಾವ ಬೆಳೆಯನ್ನು ಎಷ್ಟು ಪ್ರದೇಶದಲ್ಲಿ ಬೆಳೆದಿದ್ದಾರೆ ಎಂಬುದರ ಕುರಿತು ಸ್ಪಷ್ಟ ಮಾಹಿತಿ ನೀಡಬೇಕು. ಒಂದೇ ಜಮೀನಿನ ವಿವಿಧ ಹಿಸ್ಸಾಗಳಲ್ಲಿ ಬೇರೆ ಬೇರೆ ಬೆಳೆಗಳನ್ನು ಬೆಳೆದಿದ್ದರೆ, ಪ್ರತಿಯೊಂದು ಹಿಸ್ಸಾದಲ್ಲಿರುವ ಬೆಳೆಯ ಮಾಹಿತಿಯನ್ನೂ ಪ್ರತ್ಯೇಕವಾಗಿ ದಾಖಲಿಸಬೇಕು ಎಂದು ಸೂಚಿಸಿದರು.

ಬೆಳೆ ಸಮೀಕ್ಷೆ ಸಂದರ್ಭದಲ್ಲಿ ರೈತರು ಕೇವಲ ಒಂದು ಬೆಳೆಯ ಮಾಹಿತಿಯನ್ನು ನೀಡಿದರೆ, ದಾಖಲಾಗಿರುವ ಆ ಬೆಳೆಗೆ ಮಾತ್ರ ವಿಮೆ ಪರಿಹಾರ ದೊರೆಯುವ ಸಾಧ್ಯತೆ ಇರುತ್ತದೆ. ಆದ್ದರಿಂದ ರೈತರು ತಮ್ಮ ಜಮೀನಿನಲ್ಲಿ ಬೆಳೆದಿರುವ ಎಲ್ಲ ಬೆಳೆಗಳ ನಿಖರ ಮಾಹಿತಿಯನ್ನು ನೀಡಬೇಕು. ತಪ್ಪು ಅಥವಾ ಅಪೂರ್ಣ ಮಾಹಿತಿ ನೀಡಿದಲ್ಲಿ ದಾಖಲೆಗಳೊಂದಿಗೆ ಹೊಂದಾಣಿಕೆಯಾಗದೆ ಸಮಸ್ಯೆ ಉಂಟಾಗಬಹುದು ಎಂದು ಎಚ್ಚರಿಸಿದರು.

ಈ ವೇಳೆ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಪ್ರಶಾಂತ ಸಾಣಿ ಮಾತನಾಡಿ, ಸರ್ವೆ ನಂಬರ್‌ವಾರು ಸಮೀಕ್ಷಾ ಸಿಬ್ಬಂದಿ: ರೈತರಿಗೆ ಬೆಳೆ ಸಮೀಕ್ಷೆ ಕು-ರಿತು ಯಾವುದೇ ಮಾಹಿತಿ ಅಥವಾ ಸಹಾಯದ ಅಗತ್ಯವಿದ್ದಲ್ಲಿ ಸರ್ವೆ ನಂಬರ್ ವ್ಯಾಪ್ತಿಗೆ ಅನುಗುಣವಾಗಿ ಸರ್ವೆ ನಂಬರ್ 1 ರಿಂದ 350 ರವರೆಗೆ ಹಾಜೀಸಾಬ್ ಇಂಚಗೇರಿ7022187941, ಸರ್ವೆ ನಂಬರ್ 315 ರಿಂದ 740 ರವರೆಗೆ ದಯಾನಂದ ಕೆಲೋಜಿ 8971335871, ಸರ್ವೆ ನಂಬರ್ 741 ರಿಂದ 1033 ರವರೆಗೆ ಪರಶುರಾಮ ಕಟಕದೊಂಡ 9353856194 ನೇಮಕಗೊಂಡಿರುವ ಸಿಬ್ಬಂದಿಯನ್ನು ಸಂಪರ್ಕಿಸಬಹುದು ಎಂದು ತಿಳಿಸಿದರು.

ತಾಲೂಕಿನ ಎಲ್ಲ ರೈತರು ಬೆಳೆ ಸಮೀಕ್ಷೆಯಲ್ಲಿ ಸಕ್ರಿಯವಾಗಿ ಭಾಗವಹಿಸಿ ಸಮೀಕ್ಷೆ ಕಾರ್ಯವನ್ನು ಯಶಸ್ವಿಗೊಳಿಸಬೇಕು. ಬೆಳೆ ವಿಮಾ ಕಂಪನಿಗಳ ಹೆಸರಿನಲ್ಲಿ ಕೆಲವರು ಮಧ್ಯವರ್ತಿಗಳಾಗಿ ರೈತರಿಗೆ ಆಮಿಷವೊಡ್ಡಿ ಹಣ ವಸೂಲಿ ಅಥವಾ ವಂಚನೆ ಮಾಡುವ ಸಾಧ್ಯತೆ ಇರುವುದರಿಂದ ರೈತರು ಎಚ್ಚರಿಕೆಯಿಂದಿರಬೇಕು. ಯಾರಾದರೂ ವಿಮಾ ಕಂಪನಿಯ ಹೆಸರಿನಲ್ಲಿ ಆಮಿಷ ತೋರಿಸಿ ವಂಚನೆಗೆ ಮುಂದಾದರೆ ತಕ್ಷಣ ಕೃಷಿ ಇಲಾಖೆ ಅಥವಾ ಸಂಬಂಧಿಸಿದ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು. ಅಂತಹವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು.



# ಡಿಎಸ್ಸೆಸ್ ಧರಣಿ ಸತ್ಯಾಗ್ರಹಕ್ಕೆ ಬಿಜೆಪಿ ಪದಾಧಿಕಾರಿಗಳ ಬೆಂಬಲ

■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ಕರ್ನಾಟಕ ದಲಿತ ಸಂಘರ್ಷ ಸಮಿತಿ ಪದಾಧಿಕಾರಿಗಳು ವಿಜಯಪುರ ಜಿಲ್ಲಾ ಹಾಗೂ ದೇವರಹಿಪ್ಪರಗಿ ತಾಲ್ಲೂಕು ಆಡಳಿತದ ವೈಫಲ್ಯ ಖಂಡಿಸಿ ಹಾಗೂ ನ್ಯಾಯಯುತ ಬೇಡಿಕೆಗಳನ್ನು ಇಡೇರಿಸುವಂತೆ ಆಗ್ರಹಿಸಿ ನಡೆದ 3ನೇ ದಿನದ ಧರಣಿ ಸತ್ಯಾಗ್ರಹದಲ್ಲಿ ಬಿಜೆಪಿ ಮಂಡಲ ಪದಾಧಿಕಾರಿಗಳು ಪಾಲ್ಗೊಂಡು ಬೆಂಬಲ ವ್ಯಕ್ತಪಡಿಸಿದರು.

ಪಟ್ಟಣದ ಅಂಬೇಡ್ಕರ್ ವೃತ್ತದ ಧರಣಿ ಸ್ಥಳಕ್ಕೆ ಆಗಮಿಸಿದ ಬಿಜೆಪಿ ಮಂಡಲ ಪದಾಧಿಕಾರಿಗಳು ಪಾಲ್ಗೊಂಡು ಬೆಂಬಲಿಸಿದರು. ಈ ಸಂದರ್ಭದಲ್ಲಿ ಮಲ್ಕು ಬಾಗೇವಾಡಿ ಮಾತನಾಡಿ, ತಾಲ್ಲೂಕಿನ ಕೃಷಿ ಇಲಾಖೆಯಲ್ಲಿ 2021-22 ರಿಂದ 2025-26 ರವರೆಗೆ ಕೃಷಿ ಭಾಗ್ಯ ಯೋಜನೆಯ ಬದು ನಿರ್ಮಾಣ, ಕೃಷಿ ಹೊಂಡ ಹಾಗೂ ವಿಶೇಷ ಘಟಕ ಯೋಜನೆಯಲ್ಲಿ ಜಲಾನಯನ ಕೃಷಿ ಸಿಂಚನ ಸಹಿತ ಹಲವು ಯೋಜನೆಗಳಲ್ಲಿ ದೊಡ್ಡ ಪ್ರಮಾಣದ ಭ್ರಷ್ಟಾಚಾರ ನಡೆದಿದ್ದು ಇವುಗಳನ್ನು ಲೋಕಾಯುಕ್ತ ತನಿಖೆಗೆ ಒಳಪಡಿಸಿ ತಪ್ಪಿತಸ್ಥ ಅಧಿಕಾರಿಗಳ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಬೇಕು ಎಂಬ ಡಿಎಸ್‌ಎಸ್ ಬೇಡಿಕೆಗೆ ಧ್ವನಿಗೂಡಿಸಿದರು.

ಬಿಜೆಪಿ ಮಂಡಲ ಪ್ರಧಾನ ಕಾರ್ಯದರ್ಶಿ ಪ್ರಕಾಶ ದೊಡಮನಿ ಮಾತನಾಡಿ, ವಿಜಯಪುರ ಜಿಲ್ಲೆಯನ್ನು ಪ್ರಾದೇಶಿಕ ಮೀಸಲಾತಿ ಅಡಿ ಸೇರಿಸಿ 371(ಜೆ) ಸೌಲಭ್ಯಗಳನ್ನು ನೀಡಲು ಆಗ್ರಹಿಸಿದರು.

ಜಿಲ್ಲಾ ಸಂಘಟನಾ ಸಂಚಾಲಕ ಪ್ರಕಾಶ ಗುಡಿಮನಿ, ತಾಲ್ಲೂಕು ಸಂಚಾಲಕ ರಾಜಕುಮಾರ ಸಿಂದಗೇರಿ, ಸಂಘಟನಾ ಸಂಚಾಲಕ ಬಸವರಾಜ ಇಂಗಳಗಿ, ರಮೇಶ ಈಳಗೇರ, ಜಗದೀಶ ಚವ್ಹಾಣ, ಶ್ರೀಕಾಂತ ಬಜಂತ್ರಿ, ಆಕಾಶ ಕೊಂಬಿನ, ಪ್ರಶಾಂತ ದೊಡಮನಿ, ರಮೇಶ ಬನ್ಸೋಡೆ, ಯಮನಪ್ಪ ಭೂತಾಳಿ, ದಾದಾ ಶಾಹಪೂರ, ದಯಾನಂದ ರಾಠೋಡ ಇದ್ದರು.

# ಎಸ್‌ಟಿ ಮೀಸಲಾತಿ ಶಿಫಾರಸ್ಸಿಗೆ ಸೂಕ್ತ ರೂಪ ನೀಡಲು ಬದ್ಧ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಹಿಂದುಳಿದವರು, ಅಲ್ಪಸಂಖ್ಯಾತರು ಹಾಗೂ ದಲಿತ ಸಮುದಾಯದವರು ಮುಖ್ಯಮಂತ್ರಿಯಾಗುವುದು ಅಪರೂಪ. ಆದರೆ ಸಿದ್ದರಾಮಯ್ಯ ಅವರು ಎಲ್ಲ ಸಮುದಾಯಗಳ ಪ್ರೀತಿ, ವಿಶ್ವಾಸ ಗಳಿಸುವ ರೀತಿಯಲ್ಲಿ ಸಮ ಸಮಾಜದ ಆಶಯದೊಂದಿಗೆ ಕಾರ್ಯನಿರ್ವಹಿಸಿದ್ದ-ರಿಂದ ಎರಡು ಬಾರಿ ಸಿಎಂ ಸ್ಥಾನವನ್ನು ಅಲಂಕರಿಸುವ ಅವಕಾಶ ದೊರೆತಿದೆ. ಅವರ ರೀತಿಯಲ್ಲಿ ಜನಪರವಾಗಿ ಕಾರ್ಯನಿರ್ವಹಿಸುವುದು ಸುಲಭವಲ್ಲ. ಆದ-ರೂ ಎಲ್ಲ ಸಮುದಾಯಗಳ ಆಶಯಗಳಿಗೆ ಸ್ಪಂದಿಸುವ ಕಾರ್ಯಕ್ರಮಗಳನ್ನು ರೂಪಿಸಿಕೊಂಡು ಅವರ ಹಾದಿಯಲ್ಲಿ ನಡೆಯಲು ತಮ್ಮೆಲ್ಲರ ಸಹಕಾರ ಅಗತ್ಯ ಎಂದು ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಹೇಳಿದರು.


ಸಿಂದಗಿ ನಗರದ ಗುಂದಗಿ ಫಂಕ್ಷನ್ ಹಾಲ್‌ನಲ್ಲಿ ತಾಲೂಕು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ನೌಕರರ ಸಂಘದ ವತಿಯಿಂದ ಆಯೋಜಿಸಿದ್ದ ಸಂಗೊಳ್ಳಿ ರಾಯಣ್ಣ ಜಯಂತ್ಯೋತ್ಸವ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಾಲುಮತ ಸಮುದಾಯಕ್ಕೆ ಎಸ್‌ಟಿ ಮೀಸಲಾತಿ ಕಲ್ಪಿಸುವ ನಿಟ್ಟಿನಲ್ಲಿ ಕುಲಶಾಸ್ತ್ರೀಯ ಅಧ್ಯಯನ ನಡೆಸಿ, ಸರ್ಕಾರದ ಮೂಲಕ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿದ್ದಾರೆ. ಆ ಶಿಫಾರಸ್ಸಿಗೆ ಸೂಕ್ತ ರೂಪ ನೀಡುವ ನಿಟ್ಟಿನಲ್ಲಿ ಕೆಲಸ ಮಾಡುತ್ತೇನೆ. ಈ ವಿಷಯಕ್ಕಾಗಿ ಹೋರಾಟ ನಡೆಸಿದರೆ ಸರ್ಕಾರದ ಮಟ್ಟದಲ್ಲಿ ನನ್ನ ಬೆಂಬಲ ಸದಾ ಇರಲಿದೆ ಎಂದರು.

ಕಾರ್ಯಕ್ರಮದ ಫೋಟೋ ಪೂಜೆ ನೆರವೇರಿಸಿ ಮಾತನಾಡಿದ ಶಾಸಕ ಅಶೋಕ ಮನಗೂಳಿ, ದೇಶದ ಸ್ವಾತಂತ್ರ ಸಂಗ್ರಾಮದಲ್ಲಿ ವೀರಮರಣ ಹೊಂದಿದ ಸಂಗೊಳ್ಳಿ ರಾಯಣ್ಣ ಅವರ ಜಯಂತಿಯ ಸಂದರ್ಭದಲ್ಲಿ ಸಮಾಜದ ವತಿಯಿಂದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಪುರಸ್ಕಾರ ಉತ್ತಮ ಕಾರ್ಯವಾಗಿದೆ. ಪ್ರತಿವರ್ಷ ನಿರಂತರವಾಗಿ ನಡೆಸಬೇಕು ಎಂದು ಸಲಹೆ ನೀಡಿದರು.

ಅದ್ದೂರಿ ಮೆರವಣಿಗೆ: ಬಸವೇಶ್ವರ ವೃತ್ತದಲ್ಲಿ ಮಾಜಿ ಶಾಸಕ ರಮೇಶ ಭೂಸನೂರ ಮೆರವಣಿಗೆಗೆ ಚಾಲನೆ ನೀಡಿದರು. ಮೆರವಣಿಗೆಯು ಬಸವೇಶ್ವರ ವೃತ್ತದಿಂದ ಆರಂಭಗೊಂಡು ಪತ್ರಿಕಾ ಬೀಷ್ಮ ರೇ.ಚ. ರೇವಡಿಗಾರ ರಸ್ತೆ, ಸಂಗೊಳ್ಳಿ ರಾಯಣ್ಣ ವೃತ್ತ, ಅಂಬಿಗರ ಚೌಡಯ್ಯ ವೃತ್ತ, ಡಾ.ಬಿ.ಆರ್.ಅಂಬೇಡ್ಕರ್ ವೃತ್ತದ ಮಾರ್ಗವಾಗಿ ಸಾಗಿದ ಮೆರವಣಿಗೆಯು ಟಿಪ್ಪು ಸುಲ್ತಾನ್ ವೃತ್ತದ ಮೂಲಕ ಗುಂದಗಿ ಫಂಕ್ಷನ್ ಹಾಲ್‌ಗೆ ತಲುಪಿತು. ಕಾರ್ಯಕ್ರಮದ ಸಾನಿಧ್ಯ ವಹಿಸಿದ ಧಾರವಾಡ ರೇವಣಸಿದ್ಧೇಶ್ವರ ಮಠದ ಬಸವರಾಜ ದೇವರು ಮನಸೂರು ಆಶೀರ್ವಚನ ನೀಡಿದರು.

ಕೆ.ಈ. ಕಾಂತೇಶ, ಮಾಜಿ ಸಚಿವ ಬಂಡೆಪ್ಪ ಕಾಶೆಂಪೂರ, ಮಾಜಿ ಶಾಸಕ ಶರಣಪ್ಪ ಸುಣಗಾರ, ಬೆಂಗಳೂರು ಕುವೆಂಪು ಭಾಷಾ ಪ್ರಾಧಿಕಾರ ಅಧ್ಯಕ್ಷ ಡಾ.ಚನ್ನಪ್ಪ ಕಟ್ಟಿ, ಶರಣು ತಳಕೇರಿ ಹಾಗೂ ಡಾ.ಮಹಾಂತೇಶ ತಡಲಗಿ ಮಾತನಾಡಿದರು.

ಸಂಗೊಳ್ಳಿ ರಾಯಣ್ಣ ನೌಕರರ ಸಂಘದ ಅಧ್ಯಕ್ಷ ರಾಯಣ್ಣ ಇವಣಗಿ ಅಧ್ಯಕ್ಷತೆ ವಹಿಸಿದ್ದರು. ಗೊಳಸಾರ ಶ್ರೀಮಠದ ಅಭಿನವ ಪುಂಡಲಿಂಗ ಮಹಾಶಿವಯೋಗಿಗಳು, ಗುಬ್ಬೇವಾಡ ಸೋಮೇಶ್ವರ ಆಶ್ರಮದ ಕನ್ನಯ್ಯ ಮಹಾರಾಜರು, ಗೌರ.ಬಿ.ಭಕ್ತಿಮಂದಿರದ ಅಭಿನವ ಯಲ್ಲಾಲಿಂಗ ಮಹಾರಾಜರು, ಮಲ್ಲಣ್ಣ ಸಾಲಿ, ಎಪಿಎಂಸಿ ಅಧ್ಯಕ್ಷ ಕಲ್ಲಪ್ಪ ಬಿಸನಾಳ, ತಹಶೀಲ್ದಾರ್ ಕರೆಪ್ಪ ಬೆಳ್ಳಿ, ಕೆಕೆಆರ್‌ಟಿಸಿ ವಿಭಾಗೀಯ ನಿವೃತ್ತ ನಿಯಂತ್ರಣಾಧಿಕಾರಿ ನಾರಾಯಣಪ್ಪ ಕುರುಬರ, ನಾಗಪ್ಪ ಶಿವೂರ, ರವಿ ನಾಯ್ಕೋಡಿ, ಸಿದ್ದು ಬುಳ್ಳಾ, ನ್ಯಾಯವಾದಿ ಎಸ್.ಕೆ.ಪೂಜಾರಿ, ವೈ.ಸಿ. ಮಯೂರ, ಮಲ್ಲಿಕಾರ್ಜುನ ಸಾವಳಸಂಗ ಸೇರಿದಂತೆ ಸಮಾಜ ಬಾಂಧವರು ಇದ್ದರು. ಪ್ರಾಚಾರ್ಯ ಎ.ಆರ್. ಹೆಗ್ಗಣದೊಡ್ಡಿ ಹಾಗೂ ಶಿಕ್ಷಕ ಮಾಳಪ್ಪ ಕೆರಕಿ ನಿರೂಪಿಸಿದರು. ಶಿಕ್ಷಕ ಎಸ್. ಎಸ್. ಸಾತಿಹಾಳ ಸ್ವಾಗತಿಸಿದರು. ಶಿಕ್ಷಕ ಪಿ.ಎಸ್.ಅಗ್ನಿ ವಂದಿಸಿದರು.



■ ಸಂಗೊಳ್ಳಿ ರಾಯಣ್ಣ ಜಯಂತ್ಯೋತ್ಸವ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿದ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಭರವಸೆ

**"ಮಾಜಿ ಸಚಿವ ಬಂಡೆಪ್ಪ ಕಾಶೆಂಪೂರ ಅವರ ಬೇಡಿಕೆಯಂತೆ ಕುರಿಗಾಯಿಗಳ ಅಭಿವೃದ್ಧಿಗೆ ಹಲವು ಸೌಲಭ್ಯಗಳನ್ನು ರೂಪಿಸಲಾಗಿದೆ. ಸಮಾಜವು ಪ್ರಗತಿ ಪಥದಲ್ಲಿ ಸಾಗಬೇಕಾದರೆ ಶೈಕ್ಷಣಿಕ ಹಾಗೂ ಆರ್ಥಿಕವಾಗಿ ಅಭಿವೃದ್ಧಿ ಹೊಂದುವುದು ಅಗತ್ಯ. ಶಿಕ್ಷಣ ಮತ್ತು ಆರ್ಥಿಕ ಸಬಲೀಕರಣದ ಮೂಲಕ ಮಾತ್ರ ಸರ್ಕಾರದ ವಿವಿಧ ಸೌಲಭ್ಯಗಳನ್ನು ಸಮರ್ಪಕವಾಗಿ ಪಡೆದುಕೊಳ್ಳಲು ಸಾಧ್ಯ."**

■ ಡಾ.ಯತೀಂದ್ರ ಸಿದ್ದರಾಮಯ್ಯ
ಸಚಿವರು

# ರಸ್ತೆ ದುರಸ್ತಿಪಡಿಸದಿದ್ದರೆ ಪಿಡಬ್ಲ್ಯೂಡಿ ಕಚೇರಿ ಎದುರು ಪ್ರತಿಭಟನೆ

ಬೀದರ್: ಹಾಳಾದ ಔರಾದ್ ವಿಧಾನಸಭಾ ಕ್ಷೇತ್ರದ ರಸ್ತೆಗಳನ್ನು ದುರಸ್ತಿಪಡಿಸದಿದ್ದರೆ ಬೀದರನ ಲೋಕೋಪಯೋಗಿ ಇಲಾಖೆ ಕಾರ್ಯನಿರ್ವಾಹಕ ಎಂಜಿನಿಯರ್ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾ ಘಟಕದ ಅಧ್ಯಕ್ಷ ಸೋಮನಾಥ ಮುಧೋಳ ಎಚ್ಚ-ರಿಕೆ ನೀಡಿದ್ದಾರೆ.

ಕ್ಷೇತ್ರದಲ್ಲಿ ಲೋಕೋಪಯೋಗಿ ಇಲಾಖೆ ಅಧೀನದ ಅನೇಕ ಜಿಲ್ಲಾ ಮುಖ್ಯ ರಸ್ತೆಗಳು ತೀವ್ರವಾಗಿ ಹದಗೆಟ್ಟಿವೆ. ಹೀಗಾಗಿ ಪ್ರಯಾಣಿಕರು ಸಂಚಾರಕ್ಕೆ ಬಹಳ ತೊಂದರೆ ಅನುಭವಿಸುವಂತಾಗಿದೆ ಎಂದು ತಿಳಿಸಿದ್ದಾರೆ.

ಠಾಣಾಕುಶನೂರು-ಮುಧೋಳ್, ಔರಾದ್-ಮುಧೋಳ, ತೆಲಂಗಾಣ ಗಡಿ-ಸುಂದಾಳ-ಇಟಗ್ಯಾಳ್-ಚಿಂತಾಕಿ-ರಾಯಪಳ್ಳಿ ಕ್ರಾಸ್, ಚಿಂತಾಕಿ- ತುಳಜಾಪುರ, ಎಕಲಾರ್-ಬೆಲ್ದಾಳ್ ಮತ್ತಿತರ ರಸ್ತೆಗಳ ಉದ್ದಕ್ಕೂ ತಗ್ಗು ದಿನ್ನೆಗಳು ಸೃಷ್ಟಿಯಾಗಿವೆ ಎಂದು ಹೇಳಿದ್ದಾರೆ.

ನಿತ್ಯ ನೂರಾರು ವಾಹನಗಳು ಸಂಚರಿಸುವ ರಸ್ತೆಗಳ ಸ್ಥಿತಿ ಅಧೋಗತಿಯಾಗಿದೆ. ವಾಹನಗಳು ಅನಿವಾರ್ಯವಾಗಿ ಸರ್ಕಸ್ ಮಾಡುತ್ತಾ ಸಾಗಬೇಕಾಗಿದೆ ಎಂದು ತಿಳಿಸಿದ್ದಾರೆ.

ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ತಾಲ್ಲೂಕಿನಲ್ಲಿ ಹದಗೆಟ್ಟಿರುವ ಜಿಲ್ಲಾ ಮುಖ್ಯರಸ್ತೆಗಳ ಸಮೀಕ್ಷೆ ನಡೆಸಬೇಕು. ಕೂಡಲೇ ಅವುಗಳ ದುರಸ್ತಿಗೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

# ಬಿಎಸ್‌ಎಸ್‌ಕೆ ಹರಾಜಿಗೆ ಖಂಡ್ರೆ ಕುಮ್ಮಕ್ಕು

ಬೀದರ್: ಜಿಲ್ಲೆಯ ರೈತರ ಜೀವನಾಡಿ ಎನಿಸಿರುವ ಹುಮನಾಬಾದ್ ತಾಲೂಕಿನಹಳ್ಳಿಖೇಡ್(ಬಿ)ಸಮೀಪದ ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ (ಬಿಎಸ್-ಎಸ್‌ಕೆ ) ಯನ್ನು ಹರಾಜು ಹಾಕಿ ಹಿಂಬಾಗಿಲಿನಿಂದ ತಾವೇ ಇಟ್ಟುಕೊಳ್ಳಲು ಡಿಸಿಸಿ ಬ್ಯಾಂಕ್ ಅಧ್ಯಕ್ಷರಾದ ಅಮರಕುಮಾರ ಖಂಡ್ರೆ ಪ್ರಯತ್ನಿಸುತ್ತಿದ್ದಾರೆ. ಇದರ ಹಿಂದೆ ಅವರ ಸಹೋದರರಾದ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಕುಮ್ಮಕ್ಕು ಇದೆ ಎಂದು ಬಿಜೆಪಿ ಜಿಲ್ಲಾ ಅಧ್ಯಕ್ಷ ಸೋಮನಾಥ ಪಾಟೀಲ್ ಗಂಭೀರ ಆರೋಪ ಹೊರಿಸಿದ್ದಾರೆ. ಸಾಲ ವಸೂಲಿ ಸಂಬಂಧ ಬಿಎಸ್‌ಎಸ್‌ಕೆ ಕಾರ್ಖಾನೆಯನ್ನು ಡಿಸಿಸಿ ಬ್ಯಾಂಕ್ ಎರಡು ವರ್ಷದ ಹಿಂದೆ ಸಹ ಹರಾಜು ಹಾಕಿತ್ತು. ಆದರೆ ರೈತರ ಹೋರಾಟ, ಜಿಲ್ಲೆಯ ಜನಪ್ರತಿನಿಧಿಗಳ ಒತ್ತಡದ ನಂತರ ಸರ್ಕಾರ ಹರಾಜು ರದ್ದುಗೊಳಿಸಿತ್ತು.

# ಭಯವೆಂಬ ಭೂತ

## ಭಾವರಶ್ಮಿ

■ ಉದಯರಶ್ಮಿ ದಿನಪತ್ರಿಕೆ

'ಭಯ' ಎಂಬುದು ಮನುಷ್ಯನ ಅಸ್ತಿತ್ವದ ಅವಿಭಾಜ್ಯ ಅಂಗ. ಇದು ಕೇವಲ ಬಾಹ್ಯ ಪ್ರಚೋದನೆಗಳಿಗೆ ನೀಡುವ ಪ್ರತಿಕ್ರಿಯೆಯಲ್ಲ, ಬದಲಾಗಿ ನಮ್ಮ ಮನಸ್ಸಿನ ಆಳದಲ್ಲಿ ಸೃಷ್ಟಿಯಾಗುವ ಒಂದು ಜಟಿಲ ಕಲ್ಪನೆ. ಹೊರಗಿನ ಜಗತ್ತಿನಲ್ಲಿ ನೈಜ ಅಪಾಯವಿದ್ದಾಗ ಉಂಟಾಗುವ ಎಚ್ಚರಿಕೆಯೇ ಭಯವಾದರೆ, ಮನಸ್ಸಿನೊಳಗಿನ ಕಲ್ಪಿತ ಅಪಾಯಗಳೇ 'ಭಯವೆಂಬ ಭೂತ'ವನ್ನು ಸೃಷ್ಟಿಸುತ್ತವೆ.

ಮನಸ್ಸಿನ ರಚನೆ ಮತ್ತು ಭಯದ ಮೂಲ

ನಮ್ಮ ಮೆದುಳಿನ 'ಅಮಿಗ್ಡಾಲಾ' (ಂಟಥಿರಜಚಿಟಚಿ) ಎಂಬ ಭಾಗವು ಭಯದ ಅನುಭವಕ್ಕೆ ಕೇಂದ್ರಬಿಂದು. ಆದಿಮಾನವನಿಗೆ ಕಾಡುಪ್ರಾಣಿಗಳ ದಾಳಿಯಿಂದ ಬದುಕಲು ಈ ಭಯವೇ ರಕ್ಷಾಕವಚವಾಗಿತ್ತು. ಆದರೆ, ಆಧುನಿಕ ಮನುಷ್ಯನಿಗೆ ಅಪಾಯಗಳು ಬದಲಾಗಿವೆ. ಇಂದು ನಾವು ಪ್ರಾಣಿಗಳಿಗಿಂತ ಹೆಚ್ಚಾಗಿ ಭವಿಷ್ಯದ ಅನಿಶ್ಚಿತತೆ, ಸೋಲಿನ ಭಯ, ಅಪಮಾನದ ಭಯ, ಮತ್ತು ಇತರರ ಅಭಿಪ್ರಾಯಗಳ ಭಯದಿಂದ ಬಳಲುತ್ತಿದ್ದೇವೆ. ವಾಸ್ತವದಲ್ಲಿ ಇವುಗಳಿಗೆ ಯಾವುದೇ ಭೌತಿಕ ರೂಪವಿಲ್ಲ; ಇವೆಲ್ಲವೂ ಮನಸ್ಸಿನ ಕಲ್ಪಿತ ಸೃಷ್ಟಿಗಳು.

### ಕಲ್ಪನೆಯೇ_ಸೃಷ್ಟಿಸುವ_ಭೂತ



ಭಯವೆಂಬ ಭೂತವು ಸಾಮಾನ್ಯವಾಗಿ 'ಅಜ್ಞಾತ'ದೊಂದಿಗೆ ಬೆಳೆದುಬರುತ್ತದೆ. ನಾವು ಯಾವುದನ್ನು ಅರಿಯುವುದಿಲ್ಲವೋ ಅಥ-ವಾ ಯಾವುದರ ಫಲಿತಾಂಶ ನಮಗೆ ತಿಳಿದಿಲ್ಲವೋ, ಅಲ್ಲಿ ಮನಸ್ಸು ಭಯವನ್ನು ತುಂಬುತ್ತದೆ. ಉದಾಹರಣೆಗೆ, ಒಂದು ಕೆಲಸದಲ್ಲಿ ವಿಫಲರಾಗುತ್ತೇನೆಯೋ ಎಂಬ ಆತಂಕವು ಆ ಕೆಲಸವನ್ನು ಪ್ರಾರಂಭಿಸದಂತೆ ತಡೆಯುತ್ತದೆ. ಈ ಸೋಲಿನ ಭಯವೇ ಇಲ್ಲಿ ಭೂತ. ಇದು ನೈಜವಾಗಿ ಅಸ್ತಿತ್ವದಲ್ಲಿಲ್ಲ, ಬದಲಾಗಿ ನಮ್ಮ ಅತಿಯಾದ ಆಲೋಚನೆಗಳಿಂದ (ಔತಜಡಿ-ಣುಟಿಇಟಿಟಿರ) ಪೋಷಿಸಲ್ಪಟ್ಟಿದೆ.

ಸ್ಥಗಿತತೆ ಭಯವು ವ್ಯಕ್ತಿಯನ್ನು ವರ್ತಮಾನದಲ್ಲಿ ಬದುಕಲು ಬಿಡುವುದಿಲ್ಲ. ಭವಿಷ್ಯದ ಕಲ್ಪಿತ ಭಯದಲ್ಲಿ ಬದುಕುವುದು



ಕ್ರಿಯಾಶೀಲತೆಯನ್ನು ಕುಂಠಿತಗೊಳಿಸುತ್ತದೆ.

ನಿರ್ಧಾರ ತೆಗೆದುಕೊಳ್ಳುವ ಅಸಾಮರ್ಥ್ಯ:** ಭಯದ ವಾತಾವರಣದಲ್ಲಿ ಮನಸ್ಸು ತರ್ಕಬದ್ಧವಾಗಿ ಯೋಚಿಸುವ ಸಾಮರ್ಥ್ಯ ಕಳೆದುಕೊಳ್ಳುತ್ತದೆ. ಪರಿಣಾಮವಾಗಿ, ಸುಲಭವಾದ ದಾ-ರಿಗಳನ್ನೂ ಕಠಿಣವಾಗಿ ಕಾಣುತ್ತೇವೆ.


### ಅಂತರಮುಖಿ ಸಂಕೋಚ

ಇತರರು ಏನಂದುಕೊಳ್ಳುತ್ತಾರೆ ಎಂಬ ಭಯದಿಂದ ಮನುಷ್ಯ ತನ್ನ ನಿಜವಾದ ವ್ಯಕ್ತಿತ್ವವನ್ನು ಮರೆಮಾಚುತ್ತಾನೆ. ಇದು ವ್ಯಕ್ತಿತ್ವದ ವಿಕಸನಕ್ಕೆ ದೊಡ್ಡ ಅಡ್ಡಿ.

ಭಯವನ್ನು_ಗೆಲ್ಲುವುದು_ಹೇಗೆ?

**ಭಯವೆಂಬ ಭೂತವನ್ನು ಓಡಿಸಲು ಮಂತ್ರವೇ 'ಅರಿವು'.**


* **ಭಯದ ಸ್ವರೂಪವನ್ನು ಗುರುತಿಸಿ ಯಾವುದಕ್ಕೆ ಭಯಪಡುತ್ತಿದ್ದೇವೆ ಎಂಬುದನ್ನು ವಿಶ್ಲೇಷಿಸಿ. ಅದು ನೈಜ ಅಪಾಯವೋ ಅಥವಾ ಕಲ್ಪಿತ ಆತಂಕವೋ ಎಂದು ಪ್ರಶ್ನಿಸಿಕೊಳ್ಳಿ.**
* **ವರ್ತಮಾನದಲ್ಲಿ ಬದುಕುವುದು ಅತೀ ಹೆಚ್ಚು ಭಯವು ಭವಿಷ್ಯದ**



**ಚಿಂತೆಯಿಂದ ಬರುತ್ತದೆ. ವರ್ತಮಾನದ ಕ್ರಿಯೆಗಳ ಮೇಲೆ ಗಮನ ಹರಿಸಿದರೆ, ಭಯದ ತೀವ್ರತೆ ಕಡಿಮೆಯಾಗುತ್ತದೆ.**

* **ಸಂಭಾವ್ಯತೆಯನ್ನು ಒಪ್ಪಿಕೊಳ್ಳುವುದು ಸೋಲು, ನೋವು, ಮತ್ತು ಬದಲಾವಣೆ ಜೀವನದ ಭಾಗ. ಅನಿಶ್ಚಿತತೆಯನ್ನು ಒಪ್ಪಿಕೊಂಡಾಗ ಭಯ ತಾನೇ ತಾನಾಗಿ ಮರೆಯಾಗುತ್ತದೆ.** *ಎದುರಿಸುವುದು: ಭಯ ಪಡುವ ವಿಷಯವನ್ನೇ ಎದುರಿಸಿದಾಗ ಮಾತ್ರ ಆ ಭೂತವು ಮಾಯವಾಗುತ್ತದೆ. 'ಭಯದ ಆಚೆ ಜಯವಿದೆ' ಎಂಬ ಮಾತಿನಂತೆ, ಅನುಭವವೇ ಭಯದ ಔಷಧ.

ಭಯವೆಂಬ ಭೂತಕ್ಕೆ ಹೊರಗಿನ ಪ್ರಪಂಚದಲ್ಲಿ ಆಕಾರವಿಲ್ಲ; ಅದಕ್ಕೆ ನಮ್ಮ ಮನಸ್ಸಿನ ಆತಂಕವೇ ಜೀವನಾಧಾರ. ನಾವು ನಮ್ಮ ಆಲೋಚನೆಗಳ ಯಜಮಾನರಾದಾಗ, ಈ ಭೂತಗಳು ಕರಗಿ ಹೋಗುತ್ತವೆ. ಭಯವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವುದು ಅಸಾಧ್ಯವಿರಬಹುದು, ಆದರೆ ಅದನ್ನು ಜಾಣ್ಮೆಯಿಂದ ನಿರ್ವಹಿಸುವುದು ನಮ್ಮ ಕೈಯಲ್ಲಿದೆ. ಭಯವನ್ನು ಅರಿವಿನ ಬೆಳಕಿನಿಂದ



ನೋಡಿದಾಗ, ಅದು ಭೂತವಾಗಿ ಕಾಣುವುದಿಲ್ಲ, ಬದಲಾಗಿ ನಮ್ಮನ್ನು ಎಚ್ಚರಿಸುವ ಒಂದು ಶಕ್ತಿಯಾಗಿ ಪರಿವರ್ತನೆಯಾಗುತ್ತದೆ.

ಕೊನೆಯದಾಗಿ, ನಮ್ಮ ಮನಸ್ಸಿನ ಕತ್ತಲೆಯನ್ನು ನಾವು ನಿರ್ಮಿಸಿದರೆ, ಭಯವೆಂಬ ಭೂತಕ್ಕೆ ಅಲ್ಲಿ ನೆಲೆ ಇರಲು ಸಾಧ್ಯವಿಲ್ಲ. ಧೈರ್ಯ ಎಂದರೆ ಭಯವಿಲ್ಲದಿರುವ ಸ್ಥಿತಿಯಲ್ಲ, ಬದಲಾಗಿ ಭಯವಿದ್ದರೂ ಅದನ್ನು ಮೀರಿ ಮುನ್ನಡೆಯುವ ಮನೋಸ್ಥಿತಿ.

ಲೇಖನ
- ಶ್ರೇಯಸ್ ಕಾರ್ತಿಕ್
ಭದ್ರಾವತಿ



## ಕುಂಟೋಜಿ ಸಂಸ್ಥಾನ ಹಿರೇಮಠದ ಡಾ.ಚನ್ನವೀರ ಶಿವಾಚಾರ್ಯರ ಅಭಿಮತ

# ಜಾನಪದ ಕಲಾವಿದರೇ ನಮ್ಮ ಸಂಸ್ಕೃತಿಯ ನಿಜ ವಾರಸುದಾರರು

■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಬೆಳಕಿಗೆ ಬಾರದ ಗ್ರಾಮೀಣ ಕಲಾವಿದರೇ ನಮ್ಮ ಜನಪದ ಸಂಸ್ಕೃತಿಯ ನಿಜವಾದ ವಾರಸುದಾರರು. ಅವರ ಕಲೆ, ಬದುಕು ಮತ್ತು ಪರಂಪರೆಯಲ್ಲೇ ಭಾರತದ ಸಾಂಸ್ಕೃತಿಕ ಬೇರುಗಳು ಗಟ್ಟಿಯಾಗಿ ಬೇರೂರಿವೆ ಎಂದು ಕುಂಟೋಜಿ ಸಂಸ್ಥಾನ ಹಿರೇಮಠದ ಡಾ.ಚನ್ನವೀರ ಶಿವಾಚಾರ್ಯರು ನುಡಿದರು.

ಪಟ್ಟಣದ ಬೆಂಗಳೂರು ಬೇಕರಿ ಫಂಕ್ಷನ್ ಹಾಲ್ ನಲ್ಲಿ ನಡೆದ ಕರ್ನಾಟಕ ಜಾನಪದ ಪರಿಷತ್ ತಾಲೂಕು ಘಟಕದ ಪದಾಧಿಕಾರಿಗಳ ಪದಗ್ರಹಣ, ಜನಪದ ಚರಗ ಕೃತಿ ಲೋಕಾರ್ಪಣೆ ಹಾಗೂ ಜಾನಪದ ಕಲಾವಿದರ ಸನ್ಮಾನ ಸಮಾರಂಭದಲ್ಲಿ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ತಲೆತಲಾಂತರಗಳಿಂದ ಕಲೆ-ಪರಂಪರೆಯನ್ನು ಜೀವಂತವಾಗಿರಿಸಿರುವ ಜನಸಾಮಾನ್ಯರ ಕೊಡುಗೆಯಿಂದ ಜನಪದ ಸಂಸ್ಕೃತಿ ಉಳಿದಿದೆ. ಗ್ರಾಮೀಣ ಪ್ರದೇಶಗಳಲ್ಲಿ ಇನ್ನೂ ಅನೇಕ ಅಮೂಲ್ಯ ಪ್ರತಿಭೆಗಳು ಬೆಳಕಿಗೆ ಬಾರದ ಸ್ಥಿತಿಯಲ್ಲಿವೆ. ಅಂತಹ ಕಲಾವಿದರನ್ನು ಹುಡುಕಿ ಗುರುತಿಸಿ, ಅವರಿಗೆ ವೇದಿಕೆ ಹಾಗೂ ಪ್ರೋತ್ಸಾಹ ನೀಡುವ ಕೆಲಸವನ್ನು ಪರಿಷತ್ತು ಮಾಡಬೇಕು. ಜನಪದ ಕಲೆ ಕೇವಲ ಮನರಂಜನೆಯಲ್ಲ, ಅದು ನಮ್ಮ ಇತಿಹಾಸ, ಜೀವನಶೈಲಿ ಮತ್ತು ಸಂಸ್ಕೃತಿಯ ಜೀವಂತ ದಾಖಲೆ. ಆದ್ದರಿಂದ ಅದನ್ನು ಮುಂದಿನ ಪೀಳಿಗೆಗೆ ಹಸ್ತಾಂತರಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದರು.

ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಜಾನಪದ ಪರಿಷತ್ ಜಿಲ್ಲಾಧ್ಯಕ್ಷ ಬಿ.ಎನ್. ಪಾಟೀಲ ಮಾತನಾಡಿ, ಅಕ್ಷರ ಜಗತ್ತು ಹುಟ್ಟುವ ಮುನ್ನವೇ ಜನಪದ ಸಾಹಿತ್ಯ ಜನಜೀವನದ ಭಾಗವಾಗಿ ಸಮಾಜವನ್ನು ಮುನ್ನಡೆಸುತ್ತಿತ್ತು. ವಾದ್ಯಗಳ ಅಬ್ಬರ, ಕೃತಕ ಅಲಂಕಾರಗಳಿಲ್ಲದೆ ಜನರ ಬದುಕಿನಿಂದ ಸಹಜವಾಗಿ ಹುಟ್ಟಿಬಂದ ಕಲೆ-ಹಾಡುಗಳೇ ನಿಜವಾದ ಮೂಲ ಜಾನಪದ. ಆದರೆ ಇತ್ತೀಚಿನ ದಿನಗಳಲ್ಲಿ ಆಧುನಿಕತೆಯ ಹೆಸರಿನಲ್ಲಿ ಮೂಲ ಜಾನಪದಕ್ಕೆ ಹಲವು ರೀತಿಯ ಕಲಬೆರಕೆ ಸೇರುತ್ತಿದ್ದು, ಇದರಿಂದ ಜನಪದದ ಸಹಜ ಸೊಗಡು ಹಾಗೂ ಮೂಲ ಸ್ವರೂಪಕ್ಕೆ ಧಕ್ಕೆ ಉಂಟಾಗುತ್ತಿದೆ. ಜಾನಪದವನ್ನು ಕೇವಲ ಪ್ರದರ್ಶನದ ಕಲೆಯಾಗಿ ನೋಡುವುದಕ್ಕಿಂತ, ಅದು ನಮ್ಮ ಬದುಕು, ಭಾಷೆ, ಆಚರಣೆ ಮತ್ತು ಸಂಸ್ಕೃತಿಯ ಜೀವಂತ ದಾಖಲೆ ಎಂಬ ಅರಿವು ಮೂಡಿಸುವಲ್ಲಿ ಮತ್ತು ಜಾನಪದ ಕಲೆ ಮತ್ತು ಸಂಸ್ಕೃತಿಯ ಸಂರಕ್ಷಣೆಯಲ್ಲಿ ಕರ್ನಾಟಕ ಜಾನಪದ ಪರಿಷತ್ತು ಮಹತ್ವದ ಪಾತ್ರ ವಹಿಸುತ್ತಿದೆ. ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಯಾಗಿರುವ ಕರ್ನಾಟಕ



ಪರಿಷತ್ತಿನ ಮೂಲಕ ನೀಡಲಾಗುವ ಪ್ರಶಸ್ತಿ-ಪುರಸ್ಕಾರಗಳಿಗೆ ವಿಶೇಷ ಮೌಲ್ಯವಿದ್ದು, ಅವು ಕಲಾವಿದರ ಪ್ರತಿಭೆಗೆ ದೊರೆಯುವ ಗೌರವದ ಸಂಕೇತವಾಗಿವೆ ಎಂದರು.

ಬಸರಕೋಡದ ಪವಾಡ ಬಸವೇಶ್ವರ ಸಂಸ್ಥೆಯ ಅಧ್ಯಕ್ಷರಾದ ಕೆ.ವೈ.ಬಿರಾದಾರ ಅವರು ಜೋಳದ ತೆನೆಗಳನ್ನು ಸೂಡು ಕಟ್ಟುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪರಿಷತ್ತಿನ ಅಧ್ಯಕ್ಷ ಎ.ಆರ್.ಮುಲ್ಲಾ, ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕಾಧ್ಯಕ್ಷ ಕಾಮರಾಜ ಬಿರಾದಾರ ಮಾತನಾಡಿದರು. ಇದೇ ವೇಳೆ ಡಾ. ಪ್ರಕಾಶ ನರಗುಂದ ಸಂಪಾದಿಸಿರುವ ಜನಪದ ಚರಗ ಕೃತಿಯನ್ನು ಎಸ್.ಜಿ.ವಿ.ಸಿ. ವಿದ್ಯಾಪ್ರಸಾರಕ ವಿಶ್ವನಿಧಿ ಕಾರ್ಯದರ್ಶಿ ಅಶೋಕ ತಡಸದ ಲೋಕಾರ್ಪಣೆ ಮಾಡಿದರು.

ಇದೇ ವೇಳೆ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಮಹಿಳಾ ಘಟಕದ ನಶಾಮುಕ್ತ ಭಾರತ ಅಭಿಯಾನ ಹಾಗೂ ಮಿಷನ್ ಸ್ಪಂದನ ದಡಿ 10 ಕೋಟಿ ನಶಾಮುಕ್ತ ಪ್ರತಿಜ್ಞೆ ಸ್ವೀಕರಿಸುವ ಮಹಾ ಅಭಿಯಾನಕ್ಕೆ ಚಾಲನೆ ನೀಡಲಾಯಿತು. ಗಣ್ಯರು, ಕಲಾವಿದರು ಹಾಗೂ ಸಾರ್ವಜನಿಕರು ನಶಾಮುಕ್ತ ಸಮಾಜ ನಿರ್ಮಾಣದ ಸಂಕಲ್ಪದೊಂದಿಗೆ ಪ್ರತಿಜ್ಞೆ ಸ್ವೀಕರಿಸಿದರು.

ಕಸಾಪ ಮಾಜಿ ಅಧ್ಯಕ್ಷ ಎಂ.ಬಿ.ನಾವದಗಿ, ಶಸಾಪ ಅಧ್ಯಕ್ಷ ಸಿ.ಜಿ.ನಾಗರಾಳ, ಸಮಾಜ ಸೇವಕಿ ಕಾಶಿಬಾಯಿ ರಾಂಪೂರ, ಎಸ್.ಎಂ.ನೆರಬೆಂಚಿ, ಪರಿಷತ್ತಿನ ಮಹಿಳಾ ಘಟಕದ ಅಧ್ಯಕ್ಷೆ ವಿಜಯಲಕ್ಷ್ಮಿ ಹಿರೇಮಠ ಪದಾಧಿಕಾರಿಗಳಾದ ಸಂಗಣ್ಣ ಕಂಚಾಣಿ, ಎಲ್.ಎಂ.ಚಲವಾದಿ, ಎಸ್.ವಾಯ್.ವಗ್ಗರ, ಚೇತನ ಶಿವಶಿಂಪಿ, ಎಂ.ಎನ್. ಮಾಗಿ, ಸರಸ್ವತಿ ಪೀರಾಪೂರ, ಹುಸೇನ ಮುಲ್ಲಾ, ಎಂ.ವಿ.ಬೀಳೇಭಾವಿ, ರಮೇಶ ಇಂಗಳಗಿ, ವಿಜಯ ಸೋನಾರ, ಮಹಮ್ಮದ ರಫೀಕ್ ಢವಳಗಿ, ಎಸ್.ಆರ್. ಪಾಟೀಲ, ನರಸಮ್ಮ ಗುಬಚಿ, ಸುಧಾರಾಣಿ ಮೇಟಿ, ಸೇರಿದಂತೆ ನೂರಕ್ಕೂ ಹೆಚ್ಚು ಕಲಾವಿದರು ಹಾಗೂ ಜಾನಪದಾಸಕ್ತರು ಪಾಲ್ಗೊಂಡಿದ್ದರು. ಚಂದ್ರಶೇಖರ ಕಲಾಲ ಸ್ವಾಗತಿಸಿದರು. ಡಾ.ಪ್ರಕಾಶ ನರಗುಂದ ಆಶಯ ನುಡಿಗಳನ್ನಾಡಿದರು. ಎಸ್.ಕೆ.ಘಾಟಿ ಕಾರ್ಯಕ್ರಮ ನಿರ್ವಹಿಸಿದರು.

### ಜಾನಪದ ಕ್ಷೇತ್ರದ ಸಾಧಕರಿಗೆ ಗೌರವ

ಜಾನಪದ ಕ್ಷೇತ್ರದಲ್ಲಿ ಸಾಧನೆ ಮಾಡಿದ ಹುಲ್ಲೂರಿನ ಗುರುಪಾದಪ್ಪ ಚಲವಾದಿ, ಪೀರಾಪುರದ ಬಿ.ಎಸ್. ಬಿರಾದಾರ, ಕಾಶಿನಕುಂಟಿಯ ಬಂದಗಿಸಾಬ ಬಿಲಕೇರಿ, ಮಡಿಕೇಶ್ವರದ ಸುಭಾಸ ಚಲವಾದಿ, ಕೊಳೂರಿನ ಶೇಖಪ್ಪ ಕತ್ತಿ, ಅಬ್ಬಿಹಾಳದ ಸಿದ್ದಪ್ಪ ಅಂಕನಾಳ, ಹರಿಂದ್ರಾಳದ ರಮೇಶ ಭಜಂತ್ರಿ, ದೇವರ ಹುಲಗಬಾಳದ ಚನ್ನಮ್ಮ ಪಾಟೀಲ, ಅಮರಗೋಳದ ಶಿವಪ್ಪ ಅಮರಗೋಳ, ಕುಂಟೋಜಿಯ ಎಂ.ಪಿ.ವಾಳದವರ, ಗೋನಾಳದ ಪಿ.ಎನ್ ದ ಸುಪ್ರಿತಾ ಗೋನಾಳ ಹಾಗೂ ಬಿದರಕುಂದಿಯ ಎಸ್.ಕೆ. ಘಾಟಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

### ಹಾಡಿನ ರೂಪದಲ್ಲಿ ಪೊಲೀಸರ ಸಾಹಸಗಾಥೆ

ಕಳ್ಳತನದ ತನಿಖೆಯನ್ನೇ ಜಾನಪದ ಹಾಡಾಗಿ ಕಟ್ಟಿಕೊಟ್ಟ ಸುಪ್ರೀತಾ ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿದ್ದ ಗೋನಾಳ ಪಿ.ಎನ್. ಗ್ರಾಮದ ಜಾನಪದ ಕಲಾವಿದೆ ಕುಮಾರಿ ಸುಪ್ರೀತಾ ಗೋನಾಳ ಅವರು ಇತ್ತೀಚೆಗೆ ಬಸರಕೋಡದ ಪವಾಡ ಬಸವೇಶ್ವರ ದೇವಸ್ಥಾನದಲ್ಲಿ ನಡೆದ ಕಳ್ಳತನ ಪ್ರಕರಣವನ್ನು ಭೇದಿಸಿ ಆರೋಪಿಗಳನ್ನು ಬಂಧಿಸಿದ ಸಂಪೂರ್ಣ ಘಟನೆಯನ್ನು ಹಾಡಿನ ಮೂಲಕ ಕಟ್ಟಿ, ತನಿಖೆಯಲ್ಲಿ ಶ್ರಮಿಸಿದ ಐಜಿಪಿ, ಎಸ್‌ಪಿ, ಸಿಪಿಐ ಹಾಗೂ ಪಿಎಸ್‌ಐ ಸಂಜಯ ತಿಪರೆಡ್ಡಿ ಅವರ ತಂಡದ ಕಾರ್ಯವನ್ನು ಜನಪದ ಶೈಲಿಯಲ್ಲಿ ಬಣ್ಣಿಸಿದರು.



## ಯುವಕರಿಗೆ ಸ್ವಂತ ಉದ್ಯೋಗಗಳ ಬಗ್ಗೆ ಆಸಕ್ತಿ ಬೆಳೆಸಿ :ಪಾಟೀಲ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ರಾಜ್ಯದಲ್ಲಿ ಯುವ ಸಮುದಾಯ ಸಾಕಷ್ಟಿದೆ. ಅವರಿಗೆ ಉದ್ಯೋಗವಕಾಶಗಳಿಲ್ಲ. ಕಾರಣ ಸೌಹಾರ್ದ ಸಹಕಾರಿ ಸಂಘಗಳು ಕೇವಲ ಠೇವಣಿ ಸಂಗ್ರಹಣೆ ಮತ್ತು ಸಾಲ ಕೊಡುವದರಲ್ಲಿ ನಿರತರಾಗದೇ ವಿವಿಧ ಉದ್ಯೋಗಗಳಲ್ಲಿಯ ತಜ್ಞರನ್ನು ಕರೆಸಿ, ಯುವಕರಿಗೆ ತರಬೇತಿ ನೀಡಿ ಸ್ವಂತ ಉದ್ಯೋಗಗಳನ್ನು ಮಾಡುವ ಬಗ್ಗೆ ಆಸಕ್ತಿ ಬೆಳೆಸಿ, ರಾಜ್ಯದ ಆದಾಯ ಹೆಚ್ಚಿಸುವಲ್ಲಿ ಸಹಕಾರ ನೀಡಬೇಕೆಂದು ಸಿದ್ದಸಿರಿ ಮಲ್ಟಿ ಪರ್ಪೋಸ್ ಕೋ ಆಪರೇಟಿವ್ ಸೋಸೈಯಿಟಿ ಅಧ್ಯಕ್ಷ ರಾಮನಗೌಡ ಪಾಟೀಲ ಕರೆ ನೀಡಿದರು.

ಅವರು ಭಾನುವಾರ ಇಂಡಿ ನಗರದಲ್ಲಿ ಕ್ಷತ್ರೀಯ ಸೌಹಾರ್ದ ಸಹಕಾರಿ ಸಂಘವನ್ನು ಉದ್ಘಾಟಿಸಿ ಮಾತನಾಡಿದರು.

ರಾಜ್ಯದಲ್ಲಿ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ನಿರುದ್ಯೋಗಿಗಳಾಗಿದ್ದಾರೆ. ಅವರಿಗೆ ಸೌಹಾರ್ದ ಸಂಘಗಳು ಹೆಚ್ಚಿನ ಅವಕಾಶ ನೀಡಿ ವಿವಿಧ ಉದ್ಯೋಗಗಳಲ್ಲಿ ತೊಡಗುವಂತೆ ಮಾಡಬೇಕು. ಯುವಕ-ಯುವತಿಯರು ಮನಸ್ಸು ಮಾಡಿದ್ದಾದರೆ ಬೇಕಾದದ್ದನ್ನು ಸಾಧಿಸಬಲ್ಲರು. ಅವರಿಗೆ ಸರಿಯಾದ ಮಾರ್ಗ ತೋರಿಸುವ ಕೆಲಸವಾಗಬೇಕಿದೆ. ಆ ಕೆಲಸ ಸೌಹಾರ್ದ ಸಂಘಗಳು ಮಾಡಲು ಮುಂದಾಗಬೇಕು ಎಂದು ಸಲಹೆ ನೀಡಿದರು.

ಸಹಕಾರಿ ಸಂಘಗಳ ನಿರೀಕ್ಷಕ ವಿಜಯಕುಮಾರ ನಾಯಕ ಮಾತನಾಡಿ, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿಯಿಂದ ಯುವಕರಿಗೆ ಸಿಗುವ ಸಹಾಯ ಸೌಲಭ್ಯಗಳ ಬಗ್ಗೆ ತರಬೇತಿ ನೀಡುವದರೊಂದಿಗೆ ಇಲಾಖೆಯಿಂದ ಸಹಾಯ ನೀಡುವದಾಗಿ ಭರವಸೆ ನೀಡಿದರು.

ಕ್ಷತ್ರೀಯ ಸೌಹಾರ್ದ ಸಹಕಾರಿ ಸಂಘದ ವ್ಯವಸ್ಥಾಪಕ ನಿರ್ದೇಶಕ ವಿಲಾಸಕುಮಾರ ಶಿಂಧೆ ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಾನಿಧ್ಯತೆ ವಹಿಸಿದ್ದ ಕಟಬು ಸಿಳ್ಳೇಕ್ಯಾತ ಸಮಾಜದ ಕುಲಗುರು ಕಲ್ಲಿನಾಥ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು. ಕ್ಷತ್ರೀಯ ಸೌಹಾರ್ದ ಸಹಕಾರಿ ಸಂಘದ ಅಧ್ಯಕ್ಷ ಸಂತೋಷ ಕ್ಷತ್ರಿ ಅಧ್ಯಕ್ಷತೆ ವಹಿಸಿದ್ದರು.

ವೇದಿಕೆಯಲ್ಲಿ ಕಟಬು, ಕಟಬರ ಸಮಾಜದ ರಾಜ್ಯಾಧ್ಯಕ್ಷ ಜಗದೀಶ ಕ್ಷತ್ರಿ, ಉದ್ದಿಮೆದಾರ ರಮೇಶ ಗುತ್ತೇದಾರ, ಸ್ವತಂತ್ರ ಶಿಂಧೆ, ಹಿರಿಯ ಪತ್ರಕರ್ತ ಎ.ಸಿ. ಪಾಟೀಲ ಇದ್ದರು.

ಇದೇ ಸಂದರ್ಭದಲ್ಲಿ ಸೌಹಾರ್ದ ಸಂಘದ ನಿರ್ದೇಶಕರಿಗೆ ಹಾಗೂ ವಿವಿಧ ಸಾಧಕರಿಗೆ ಸನ್ಮಾನಿಸಲಾಯಿತು. ಸ್ವತಂತ್ರ ಶಿಂಧೆ ಸ್ವಾಗತಿಸಿದರು. ನಾರಾಯಣ ಶಿಂಧೆ ವಂದಿಸಿದರು.

## ಕರ್ನಾಟಕ ರಕ್ಷಣಾ ವೇದಿಕೆ ಸದಸ್ಯತ್ವ ಅಭಿಯಾನಕ್ಕೆ ಚಾಲನೆ

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ಸಂಘಟನೆಗಳು ಸಾಮಾಜಿಕ ಜವಾಬ್ದಾರಿ, ವಿಶೇಷ ಕಳಕಳಿಯ ಮೂಲಕ ಕಾರ್ಯನಿರ್ವಹಿಸಿ ಗುರುತಿಸಿಕೊಳ್ಳಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆ ತಾಲ್ಲೂಕು ಅಧ್ಯಕ್ಷ ರಹಿಮಾನ ಕಣಕಾಲ ಹೇಳಿದರು.

ಪಟ್ಟಣದ ಪ್ರವಾಸಿಮಂದಿರದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣಶೆಟ್ಟಿ ಬಣ) ವತಿಯಿಂದ ನೂತನ ಪದಾಧಿಕಾರಿಗಳಿಗೆ ಸದಸ್ಯತ್ವ ಅಭಿಯಾನ ಹಾಗೂ ಪದಗ್ರಹಣ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಂಘಟನೆಗಳು ನಿತ್ಯ ನಿರಂತರ ಕಾಯಕನಿಷ್ಠೆಯಲ್ಲಿರಬೇಕು. ಪಕ್ಷಬೇಧ ಮರೆತು, ಜಾತ್ಯಾತೀತ ಮನೋಭಾವನೆಯಿಂದ ಸಂಘಟಿಸಿ ಸರ್ವ ಸಮುದಾಯಕ್ಕೂ ಸಹಕಾರಿಯಾಗಬೇಕು. ಹುದ್ದೆಗಳಿಗಾಗಿ ಸಂಘಟನೆಗೆ ಸೇರದೆ ಸಮಾಜಮುಖಿ ಚಿಂತನೆ ನಮ್ಮಲ್ಲಿರಬೇಕು ಎಂದರು.

ಕಾರ್ಯಧ್ಯಕ್ಷ ಭೀಮನಗೌಡ ನಾಗರಾಳ ಮಾತನಾಡಿ, ಇಡೀ ರಾಜ್ಯದಲ್ಲಿ ಕ್ರೀಯಾಶೀಲವಾಗಿ ನಮ್ಮ ಪ್ರವೀಣಶೆಟ್ಟಿ ಬಣದ ಕರವೇ ಬಳಗ ಕಾರ್ಯ ನಿರ್ವಹಿಸುತ್ತಿದೆ. ಕರವೇ ಹೆಸರನ್ನು ಯಾರು ದುರ್ಬಳಕೆ ಮಾಡಿಕೊಳ್ಳಬಾರದು. ಸಾಮಾಜಿಕ ಕಾರ್ಯಕ್ಕೆ ಸದಾ ಬೆಂಬಲವಾಗಿ ನಿಲ್ಲಬೇಕು. ಸರ್ಕಾರಿ ಯೋಜನೆಗಳು, ಸೌಲಭ್ಯಗಳು ಸಾರ್ವಜನಿಕರಿಗೆ ತಲುಪುವಂತಾಗಲು ಸಂಘಟನೆಗಳು ಸೇತುವೆಯಾಗಬೇಕು ಈ ನಿಟ್ಟಿನಲ್ಲಿ ನಮ್ಮ ತಾಲೂಕಿನಲ್ಲಿ ಸಂಘಟನೆ ಗಟ್ಟಿಗೊಳಿಸೋಣ ಎಂದರು.

ತಾಲ್ಲೂಕು ಉಪಾಧ್ಯಕ್ಷ ನಾಗೇಶ್ ಕಮತಗಿ, ಕಾರ್ಮಿಕ ಘಟಕ ಅಧ್ಯಕ್ಷ ಹಸನ್ ಭಗವಾನ್, ತಾಲ್ಲೂಕು ಸಂಚಾಲಕ ಸಂತೋಷ ರಾಠೋಡ, ಸಂಘಟನಾ ಕಾರ್ಯದರ್ಶಿ ಬೀರು ಹಳ್ಳಿ , ಮಡಿವಾಳಯ್ಯ ಮಠಪತಿ, ದಿಲೀಪ ದೊಡ್ಡಮನಿ, ಅಜೀಮ್ ಪಟೇಲ್, ಪ್ರವೀಣಕುಮಾರ ಪವಾರ, ಸಲೀಂಸಾಬ್ ತುರುಕನಗಿರಿ, ಸಂತೋಷ ಕೊಟಗಿ, ಜಹಾಂಗೀರ ಮುಲ್ಲಾ ಸೇರಿದಂತೆ ರಕ್ಷಣಾ ವೇದಿಕೆಯ ವಿವಿಧ ಗ್ರಾಮ ಘಟಕಗಳ ಹಾಗೂ ತಾಲ್ಲೂಕು ಪದಾಧಿಕಾರಿಗಳು ಇದ್ದರು.

## ವಿಜಯಪುರದಲ್ಲಿ ಅರಣ್ಯ ಪ್ರದೇಶ ಶೇ.0.17 ರಿಂದ ಶೇ.2.4 ಕ್ಕೆ ಏರಿಕೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ವಿಜಯಪುರದಲ್ಲಿ ಕಳೆದ ಹತ್ತು ವರ್ಷಗಳಲ್ಲಿ ಹಮ್ಮಿಕೊಂಡ ಕೋಟಿ ವೃಕ್ಷ ಅಭಿಯಾನದ ಪರಿಣಾಮವಾಗಿ, ಅರಣ್ಯ ಪ್ರದೇಶವು ಶೇಕಡಾ 0.17 ರಿಂದ ಶೇಕಡಾ 2.4 ಕ್ಕೆ ಏರಿಕೆಯಾಗಿದೆ ಎಂದು ಕೆ.ಎಸ್.ಡಿ.ಎಲ್. ವ್ಯವಸ್ಥಾಪಕ ನಿರ್ದೇಶಕ ಪ್ರಶಾಂತ್ ಪಿ.ಕೆ.ಎಂ ಹೇಳಿದರು.

ಬೆಂಗಳೂರು ಕರ್ನಾಟಕ ಟೆನ್ನಿಸ್ ಕ್ಲಬ್ ಸಭಾಂಗಣದಲ್ಲಿ ವಿಜಯಪುರ ವೃಕ್ಷೋಥಾನ ಕುರಿತು ಬೆಂಗಳೂರು ಓಟಗಾರರಿಗೆ ಹಮ್ಮಿಕೊಂಡ ಸಭೆಯಲ್ಲಿ ಮಾತನಾಡಿದ ಅವರು, ಶತ-ಶತಮಾನದ ವಿಜಯಪುರದಲ್ಲಿ ಕಾಡೇಮ್ಮೆ ಮತ್ತು ಕೃಷ್ಣಮೃಗಗಳು ಇಲ್ಲಿ ವಾಸಿಸುತ್ತಿದ್ದವು ಎಂಬುದು ವಿಜಯಪುರದ ಗೆಜೆಟಿಯರ್ ನಲ್ಲಿ ದಾಖಲಾಗಿದೆ. ನಂತರದಲ್ಲಿ ಸತತ ಬರಗಾಲ ಮತ್ತು ಅಂತರ್ಜಲ ಕುಸಿತದಿಂದ ಕಾಡು ನಾಶವಾಗಿ ಬರ ಭೂಮಿಯಿಂದ ಇಂಥಹ ಪ್ರಾಣಿಗಳು ಕಣ್ಮರೆಯಾಗಿದ್ದವು. ಇದೀಗ ಈ ಭಾಗದಲ್ಲಿ ನೀರಾವರಿ ಜೊತೆಗೆ ಅರಣ್ಯೀಕರಣಕ್ಕೂ ಆದ್ಯತೆ ನೀಡಿದ ಸಚಿವ ಎಂ.ಬಿ.ಪಾಟೀಲರ ವಿಶೇಷ ಪ್ರಯತ್ನದಿಂದ ಆರಂಭಗೊಂಡ ಕೋಟಿವೃಕ್ಷ ಅಭಿಯಾನದ ಪರಿಣಾಮ ಇಲ್ಲಿ ಅರಣ್ಯೀಕರಣ ಹೆಚ್ಚಳವಾಗಿದೆ. ವೃಕ್ಷೋಥಾನ್ ಹೆರಿಟೇಜ್ ರನ್ ಕೇವಲ ಓಟವಲ್ಲದೇ ಅದು ಚಿಕ್ಕ ಮಕ್ಕಳು, ಸ್ವಾಮೀಜಿಗಳು ಸೇರಿದಂತೆ ಎಲ್ಲಾ ವಯೋಮಾನದ ನಾಗರಿಕರು ಸೇರಿ ಆಚರಿಸುವ ಹಸಿರು ಹಬ್ಬವಾಗಿದೆ ಎಂದರು.

ಭಾರತದ ಪ್ರಮುಖ ಮ್ಯಾರಥಾನ್ ಗಳನ್ನು ಆಯೋಜಿಸುವ ಎನ್.ಇ.ಬಿ ಸ್ಪೋರ್ಟ್ಸ್ ಮುಖ್ಯಸ್ಥ ನಾಗರಾಜ ಅಡಿಗ ಮಾತನಾಡಿ, ಮ್ಯಾರಥಾನ್ ಅಂದರೆ 42 ಕಿ.ಮೀ ಓಟ. ವಿಜಯಪುರದಲ್ಲಿ ಮುಂದಿನ ದಿನಗಳಲ್ಲಿ 42ಕಿ.ಮೀ ಫುಲ್ ಮ್ಯಾರಥಾನ್ ಆಯೋಜಿಸಿದರೆ ನಮ್ಮ ಸಂಸ್ಥೆಯಿಂದ ಎಲ್ಲ ಅಗತ್ಯ ನೆರವು ನೀಡಲಾಗುವುದು ಎಂದರು.

ಕೈಗಾರಿಕೆ ಸಚಿವರ ಆಪ್ತಕಾರ್ಯದರ್ಶಿ ನರೇಂದ್ರ ಮಾತನಾಡಿ, ಬೆಳಗಿನ ಜಾವ ನಗರದ ಸುತ್ತಲಿನ ಯಾವುದೇ ರಸ್ತೆಗಳಿಗೂ ಹೋದರೂ ಜನರು ಸೈಕಲ್ ತುಳಿಯುತ್ತಿರುತ್ತಾರೆ ಇಲ್ಲ ಓಡುತ್ತಿರುತ್ತಾರೆ. ಅಷ್ಟರ ಮಟ್ಟಿಗೆ ಅಲ್ಲಿ ಬದಲಾವಣೆ ಬಂದಿದೆ. ಡ್ರಗ್ಸ್, ತಂಬಾಕುಗಳಿಗೆ ಯುವಕರು ದಾಸರಾಗುವ ಈ ಕಾಲದಲ್ಲಿ ಓಟಗಳು ಯುವಕರಲ್ಲಿ ಸಕಾರಾತ್ಮಕವಾಗುತ್ತವೆ ಇದು ವಿಜಯಪುರದಲ್ಲಿ ನೋಡಲು ಸಾಧ್ಯ ಎಂದರು.

ಬೆಂಗಳೂರಿನ ಓಟಗಾರರಾದ ಸಿದ್ದೇಶ ಹಣಮಂತಪ್ಪ, ರವಿ ಪಾಟೀಲ, ವೃಕ್ಷೋಥಾನ್ ಕುರಿತು ತಮ್ಮ ಅನುಭವ ಹಂಚಿಕೊಂಡರು.

ಈ ಸಂದರ್ಭದಲ್ಲಿ ವಿಜಯಪುರ ಸೈಕ್ಲಿಂಗ್ ಗ್ರುಪ್ ಅಧ್ಯಕ್ಷ ಡಾ.ಮಹಾಂತೇಶ ಬಿರಾದಾರ ಸ್ವಾಗತಿಸಿದರು. ಕೋಟಿವೃಕ್ಷ ಅಭಿಯಾನ ಸಂಚಾಲಕ ಡಾ.ಮುರುಗೇಶ ಪಟ್ಟಣಶೆಟ್ಟಿ ವಂದಿಸಿದರು. ಪರಿಸರ ಪ್ರೇಮಿ ಪ್ರಕೃತಿ ಪ್ರಸನ್ನ, ನಮ್ಮ ಜೀವನದಲ್ಲಿ ಒಂದಾದರೂ ಸಸಿ ನೆಟ್ಟು, ಪೋಷಿಸುತ್ತೇವೆ ಎಂಬ ಪ್ರತಿಜ್ಞೆ ಬೋಧಿಸಿದರು.

### ವಿಜಯಪುರ ವೃಕ್ಷೋಥಾನ ಕುರಿತು ಬೆಂಗಳೂರು ಓಟಗಾರರಿಗೆ ಹಮ್ಮಿಕೊಂಡ ಸಭೆಯಲ್ಲಿ ಕೆ.ಎಸ್.ಡಿ.ಎಲ್. ವ್ಯವಸ್ಥಾಪಕ ನಿರ್ದೇಶಕ ಪ್ರಶಾಂತ್ ಪಿ.ಕೆ.ಎಂ ಹೇಳಿಕೆ

ಬೆಂಗಳೂರು ರನ್ನಿಂಗ್, ಫಿಟ್ ಬಿಜ್, ಕಬ್ಬನ್ ಪಾರ್ಕ್ ರನ್ನರ್ಸ್ ಸೇರಿದಂತೆ ಹಲವು ರನ್ನಿಂಗ್ ಗ್ರುಪ್ ಸದಸ್ಯರು ಭಾಗವಹಿಸಿ, ವಿಜಯಪುರ ನಗರದಲ್ಲಿ ಡಿಸೆಂಬರ್ 13, 2026 ರಂದು ಆಯೋಜಿಸಿದ ವೃಕ್ಷೋಥಾನ್ ಹೆರಿಟೇಜ್ ರನ್ ನಲ್ಲಿ ಭಾಗವಹಿಸುವುದಾಗಿ ತಿಳಿಸಿದರು.

## ವಿಜಯಪುರದಲ್ಲಿ ಎರಡು ದಿನ ಮದ್ಯ ಮಾರಾಟ ನಿಷೇಧ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಈದ್-ಮಿಲಾದ್ ಹಿನ್ನೆಲೆಯಲ್ಲಿ ನಗರದಲ್ಲಿ ಶಾಂತಿ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಆ. 25 ಮತ್ತು 26ರಂದು ವಿಜಯಪುರ ನಗರ ವ್ಯಾಪ್ತಿಯಲ್ಲಿ ಮದ್ಯ ಮಾರಾಟ ನಿಷೇಧಿಸಿ ಜಿಲ್ಲಾಧಿಕಾರಿ ಡಾ. ಆನಂದ್ ಕೆ. ಆದೇಶ ಹೊರಡಿಸಿದ್ದಾರೆ. ಆಗಸ್ಟ್ 25ರ ಬೆಳಿಗ್ಗೆ 6 ಗಂಟೆಯಿಂದ ಆ. 26ರ ಮಧ್ಯರಾತ್ರಿ 12 ಗಂಟೆಯವರೆಗೆ ಮದ್ಯ ಮಾರಾಟವನ್ನು ವಿಜಯಪುರ ನಗರದಲ್ಲಿ ನಿಷೇಧಿಸಲಾಗಿದೆ. ಈದ್-ಮಿಲಾದ್ ಪ್ರಯುಕ್ತ ನಗರದ ಪ್ರಮುಖ ರಸ್ತೆಗಳಲ್ಲಿ ಬೃಹತ್ ಮೆರವಣಿಗೆಗಳು ಜರುಗಲಿವೆ. ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 21ರ ಅನ್ವಯ ಸಾರಾಯಿ ಸೇರಿದಂತೆ ಎಲ್ಲಾ ಮಾದರಿಯ ಮದ್ಯ ಮಾರಾಟ, ಸಂಗ್ರಹಣೆ ಹಾಗೂ ಹಂಚಿಕೆಯನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ನಿಷೇಧಾಜ್ಞೆಯಲ್ಲಿ ತಿಳಿಸಿದ್ದಾರೆ.

### ಯುವ ಭಾರತ ಸಂಸ್ಥಾಪಕ ಅಧ್ಯಕ್ಷ ಹಾಗೂ ವುಶು ಸಂಸ್ಥೆ ಅಧ್ಯಕ್ಷ ಉಮೇಶ ಕಾರಜೋಳ ಅಭಿಮತ

# ವುಶು ಕ್ರೀಡೆಯಿಂದ ಆತ್ಮರಕ್ಷಣೆ, ಶಿಸ್ತು, ಏಕಾಗ್ರತೆ ಸಾಧ್ಯ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಆತ್ಮರಕ್ಷಣೆ, ಶಿಸ್ತು, ಏಕಾಗ್ರತೆ ಮೂಡಿಸುವಲ್ಲಿ ವುಶು ಬಹುಮುಖ್ಯವಾದ ಕ್ರೀಡೆಯಾಗಿದೆ ಎಂದು ಯುವ ಭಾರತ ಸಂಸ್ಥಾಪಕ ಅಧ್ಯಕ್ಷ ಹಾಗೂ ವುಶು ಸಂಸ್ಥೆ ಅಧ್ಯಕ್ಷ ಉಮೇಶ ಕಾರಜೋಳ ಹೇಳಿದರು.

ವಿಜಯಪುರದ ಡಾ.ಬಿ.ಆರ್. ಅಂಬೇಡ್ಕರ ಒಳಾಂಗಣ ಕ್ರೀಡಾಂಗಣದಲ್ಲಿ ಜಿಲ್ಲಾ ವುಶು ಸಂಸ್ಥೆ, ಶ್ರೀಮತಿ ಮೀನಾಕ್ಷಿ ಕಲ್ಲೂರ ಮಹಿಳಾ ಮಹಾವಿದ್ಯಾಲಯದ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಖೇಲೋ ಇಂಡಿಯಾ ಅಸ್ಮಿತಾ ಮಹಿಳಾ ವುಶು ಕ್ರೀಡಾಕೂಟಕ್ಕೆ ವಿದ್ಯುಕ್ತವಾಗಿ ಚಾಲನೆ ನೀಡಿ ಮಾತನಾಡಿದ ಅವರು, ವುಶು ಇಂದು ಪ್ರಪಂಚದಾದ್ಯಂತ ಜನಪ್ರಿಯತೆ ಪಡೆದುಕೊಂಡಿದೆ, ವಿಜಯಪುರ ಭಾಗದಲ್ಲಿಯೂ ಈ ಕ್ರೀಡೆಯಲ್ಲಿ ಅನೇಕರು ಪರಿಣಿತರಾಗಿದ್ದಾರೆ, ಹೀಗಾಗಿ ಅವರಿಗೆ ಪ್ರೋತ್ಸಾಹದ ವೇದಿಕೆ ಕಲ್ಪಿಸಬೇಕಿದೆ, ಈ ಪ್ರೋತ್ಸಾಹದ ವೇದಿಕೆ ಕಲ್ಪಿಸುವುದರಿಂದ ಅವರು ಈ ಕ್ರೀಡೆಯಲ್ಲಿ ಪಾರಂಗತವಾಗಲು ಸಾಧ್ಯವಾಗುತ್ತದೆ, ನಮ್ಮ ಕ್ರೀಡಾ ಪ್ರತಿಭೆಗಳು ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಮಿಂಚಬೇಕು ಎಂದು ಕರೆ ನೀಡಿದರು.

ಭಾರತದಲ್ಲಿ ವುಶು ಕ್ರೀಡೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ಹಲವಾರು ಕಡೆಗಳಲ್ಲಿ ಈ ಕ್ರೀಡಾಕೂಟ ಆಯೋಜಿಸಲಾಗುತ್ತಿದೆ ಎಂದರು.

ಮುಖ್ಯ ಅತಿಥಿಯಾಗಿದ್ದ ಆಂತರಿಕ ಭದ್ರತಾ ವಿಭಾಗದ ಪೊಲೀಸ್ ಅಧಿಕಾರಿ ಶಕೀಲ್ ಪಿಂಜಾರ ಮಾತನಾಡಿ, ಮಹಿಳೆಯರು ಆತ್ಮರಕ್ಷಣೆಯ ಕಲೆಗಳಾದ ಕರಾಟೆ, ವುಶು ಮೊದಲಾದವುಗಳ ಬಗ್ಗೆ ಆಸಕ್ತಿ ವಹಿಸಬೇಕು, ಈ ಕ್ರೀಡೆಗಳು ಬದುಕಿನಲ್ಲಿ ಹೊಸ ಭರವಸೆಯನ್ನು ಮೂಡಿಸುತ್ತವೆ ಎಂದರು.

ಈ ಸಂದರ್ಬದಲ್ಲಿ ರಾಜಶೇಖರ ದೈವಾಡಿ, ಶ್ರೀಮತಿ ಆರತಿ ಪಾಟೀಲ, ಅಶೋಕ ಡಿ ಮೋಕಾಶಿ, ರವಿ ಎಸ್ ಕಲ್ಲೂರ, ಭರತರಾಜ ದೇಸಾಯಿ, ಅನೀಲಕುಮಾರ ಪೂಜಾರಿ, ಶಂಕರ ಸಾನಪ್ಪ, ಶ್ರೀದೇವಿ ಡೆಂಗಿ, ವಿಜಯಲಕ್ಷ್ಮೀ ಪಾಟೀಲ, ಮಲಕಪ್ಪ ಮೊಸಲಗಿ, ಬಸವರಾಜ ಹಚಡದ, ಮೊದಲಾದವರು ಉಪಸ್ಥಿತರಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR